ಸಂಪುಟ : 10 ಸಂಚಿಕೆ: 75 ಪುಟ : 4+2 ಬೆಲೆ: 3.00 ಮಂಗಳವಾರ ಎಪ್ರಿಲ್ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 75 Pages : 4+2 Price : 3.00 Tuesday April 22 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್:22ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 16, 21 – ಶರೀಫ ಅಜ್ಜನ ಗದ್ದುಗೆ, ಗೌಳಿಯವರ ಲೈನ್, ರಹಮತ್ ನಗರ, ಕುಷ್ಟರೋಗ ಕಾಲೋನಿ, ಅಂಬೇಡ್ಕರ್ ನಗರ, ಕುಂಬೇಶ್ವರ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34, 35 – ವಡ್ಡರಗೇರಿ, ಕೊರವರ ಓಣಿ, ಮೂರು ಶಿಳ್ಳಿನ ವಕಾರ, ಶಿವಾನಂದ ಗಾರ್ಡನ್, 1,2,3 ನೇ ಕ್ರಾಸ್‌ಗಳು. ವಾರ್ಡ್ ನಂ. 11 – ನಿಸರ್ಗ ಬಡಾವಣೆ, ರಿಂಗ್ ರೋಡ್, 1, 2ನೇ ಕ್ರಾಸ್‌ಗಳು, ಅಬ್ದುಲ್ ಕಲಾಂ ರಸ್ತೆ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದ್ವಿತೀಯ ಪಿಯುಸಿ ಪರೀಕ್ಷೆ-2ರ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್ ಸೂಚನೆ

# ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ಜರುಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ-2 ಪರೀಕ್ಷೆಗಳು ಎಪ್ರಿಲ್ 24ರಿಂದ ಮೇ 8ರವರೆಗೆ ನಡೆಯಲಿದ್ದು, ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ವಿಡಿಯೋ ಸಭಾಂಗಣದಲ್ಲಿ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಎಪ್ರಿಲ್ 24ರಿಂದ ಮೇ 8ರವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಈ ಪತ್ರಿಬಂಧಕಾಜ್ಞೆ ಕಟ್ಟುನಿಟ್ಟಾಗಿ ಜಾರಿಗೊಳಿಸಲು ಹಾಗೂ ಸೂಕ್ತ ಬಂದೋಬಸ್ತ್ ಒದಗಿಸಲು ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ



ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ.

ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ರೀತಿಯ ಕೈಗಡಿಯಾರವನ್ನು ಕಟ್ಟಿಕೊಂಡು/ತೆಗೆದುಕೊಂಡು ಹೋಗುವಂತಿಲ್ಲ. ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಮೊಬೈಲ್ ಫೋನ್, ಬ್ಲೂಟೂಥ್, ಸೈಡ್ ರೂಲ್ಸ್, ಕ್ಯಾಲ್‌ಕ್ಯುಲೇಟರ್, ವೈಟ್ ಫ್ಲುಯಿಡ್, ವೈರ್‌ಲೆಸ್ ಸೆಟ್ಸ್, ಪೇಪರ್ ಚೀಟಿ, ಪುಸ್ತಕ ಇತ್ಯಾದಿಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ-2 ಪರೀಕ್ಷೆಗಳನ್ನು ಯಾವುದೇ ಅಕ್ರಮಕ್ಕೆ ಆಸ್ಪದ ನೀಡದೇ ಪಾರದರ್ಶಕವಾಗಿ ಜರುಗಿಸಬೇಕೆಂದು ತಿಳಿಸಿದರು.

> ಪರೀಕ್ಷಾ ಸಮಯದಲ್ಲಿ ಯಾವುದೇ ಅಕ್ರಮ, ಅವ್ಯವಹಾರ, ಲೋಪದೋಷಗಳಾಗದಂತೆ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಿದ ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ಶಿಸ್ತು ಮತ್ತು ಜವಾಬ್ದಾರಿಯಿಂದ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ಮಾತನಾಡಿ, ಜಿಲ್ಲೆಯ 9 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿದ್ದು, ಪರೀಕ್ಷೆ ಸುಗಮವಾಗಿ ಜರುಗಲು ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸ್ವಚ್ಛತೆ, ಸಿ.ಸಿ ಟಿವಿ ಅಳವಡಿಕೆ, ಸೂಕ್ತ ಬಂದೋಬಸ್ತ್ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಡಯಟ್ ಪ್ರಾಂಶುಪಾಲರಾದ ಜಿ.ಎಲ್. ಬಾರಾಟಕ್ಕೆ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಜನ ಬೆಂಬಲವಿಲ್ಲದ ಬಿಜೆಪಿಯ ಜನಾಕ್ರೋಶ ಯಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದಲ್ಲಿ ಬಿಜೆಪಿಗೆ ಜನರ ಆಶೀರ್ವಾದ ಇಲ್ಲದೆ ಜನಾಕ್ರೋಶ ಯಾತ್ರೆ ಮಾಡಲು ಹೊರಟಿರುವ ಬಿಜೆಪಿ ನಡೆಯನ್ನು ಯುವ ಕಾಂಗ್ರೆಸ್ ಮುಖಂಡ ಸೈಯ್ಯದ್ ಖಾಲಿದ್ ಕೊಪ್ಪಳ ಖಂಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸಿದ್ದರಾಮಯ್ಯ ಸರ್ಕಾರದಿಂದ ಜನರ ಆರ್ಥಿಕ ಸ್ಥಿತಿ ಸುಧಾರಣೆ ಆಗಿದೆ. ಗೃಹಲಕ್ಷ್ಮಿ ಯೋಜನೆ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಜನ ಸಂಪೂರ್ಣವಾಗಿ ಕಾಂಗ್ರೆಸ್ ಜೊತೆಗೆ ಇದ್ದಾರೆ. ರಾಜ್ಯದಲ್ಲಿ ಬಿಜೆಪಿ ಮಾಡುತ್ತಿರುವ ಜನ ಆಕ್ರೋಶ ಯಾತ್ರೆಗೆ ಶೂನ್ಯ ಬೆಂಬಲ ಸಿಕ್ಕಿದೆ. ಕೇಂದ್ರ ಬಿಜೆಪಿ ಸರ್ಕಾರದ ವೈಫಲ್ಯ ಮುಚ್ಚಲು, ಬಿಜೆಪಿ ಅವರು ಈ ಯಾತ್ರೆ ಮಾಡುತ್ತಿದ್ದಾರೆ ಎಂದು ಕಾಂಗ್ರೆಸ್ ಯುವ ಮುಖಂಡ ಸೈಯ್ಯದ್ ಖಾಲಿದ್ ಕೊಪ್ಪಳ ಪತ್ರಿಕಾ ಪ್ರಕಟಣೆ ಮೂಲಕ ಟೀಕಿಸಿದ್ದಾರೆ.

## ಎ.25ರಂದು ಜಾಥಾ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಮಲೇರಿಯಾ ದಿನದ ಪ್ರಯುಕ್ತ ಎಪ್ರಿಲ್ 25 ರಂದು ಬೆಳಿಗ್ಗೆ 8.30 ಗಂಟೆಗೆ ಯುಪಿಎಚ್‌ಸಿ ಬೆಟಗೇರಿ, ಹುಯಿಲಗೋಳ ರಸ್ತೆ, ಬಾಲಾಜಿ ಮಂದಿರ ಹತ್ತಿರ ಗದಗ ಸ್ಥಳದಿಂದ ಸಾರ್ವಜನಿಕರಿಗೆ ಮಲೇರಿಯಾ ರೋಗದ ಬಗ್ಗೆ ಅರಿವು ಮೂಡಿಸಲು ಜಿಲ್ಲಾ ಮಟ್ಟದ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಪ್ರತಿಭಟನೆ । ಶಾಸಕ ಯತ್ನಾಳ ವಿರುದ್ಧ ಕ್ರಮಕ್ಕೆ ಆಗ್ರಹ

# ಮುಸ್ಲಿಂ ಸಮುದಾಯದಿಂದ ರಾಷ್ಟ್ರಪತಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅಹಲೆ ಸುನ್ನತ ವಲ್ ಜಮಾತ ಜಾಮಿಯಾ ಮಸ್ಜಿದ ಹಾಗೂ ಮುಸ್ಲಿಂ ಸಂಘಟನೆಗಳ ವತಿಯಿಂದ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಸೋಮವಾರ ಶಿರಹಟ್ಟಿಯಲ್ಲಿ ಪ್ರತಿಭಟನೆ ನಡೆಸಿ ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮುಸ್ಲಿಂ ಮುಖಂಡರು, ಬಿಜೆಪಿ ಪಕ್ಷವು ವಕ್ಫ್-2024ರ ಪ್ರಸ್ತಾಪಿತ ವಿಧೇಯಕವು ಬಹುಸಂಖ್ಯಾತ ಪ್ರಚಾರದ ಅಡಿಯಲ್ಲಿ ವಕ್ಫ್‌ನ್ನು ದುರ್ಬಲಗೊಳಿಸುವ ಪ್ರಯತ್ನವಾಗಿದೆ. ಇದು ಸಾಮಾನ್ಯ ತತ್ವಗಳಿಗೆ ಮತ್ತು ಭಾರತದಲ್ಲಿ ನೆಲೆಗೊಂಡ ಕಾನೂನಿಗೆ ವಿರುದ್ಧವಾಗಿದೆ. ಬಿಜೆಪಿ ಪಕ್ಷವು ವಕ್ಫ್‌ಗಳ ವಿರುದ್ಧ ಸುಳ್ಳು ಪ್ರಚಾರ ಮಾಡುತ್ತಿದೆ. ಇದು ಬಿಜೆಪಿಯ ಕೆಟ್ಟ ಅಜೆಂಡಾವಾಗಿದೆ. ವಕ್ಫ್ ಕಾಯ್ದೆ ಜಾರಿಗೆ ನಾವು ಬಿಡುವದಿಲ್ಲ ಎಂದು ಕೇಂದ್ರ ಸರಕಾರದ ನಡೆಗೆ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮೌಲಾನ ಮಜಹರಖಾನ ಪಠಾಣ,




ಲತೀಫಶ್ಯಾ ಮಕಾನದಾರ, ಮಹ್ಮದಖುರೇಶಿ ಮನಿಯಾರ, ಅನ್ವರ ಬಾಗೇವಾಡಿ, ಹುಮಾಯೂನ್ ಮಾಗಡಿ, ಚಾಂದಸಾಬ ಮುಳಗುಂದ, ಅಶ್ರತಅಲಿ ಢಾಲಾಯತ, ಇಸಾಕ ಆದ್ರಳ್ಳಿ, ಅಬ್ದುಲಗನಿ ಕುಬಸದ, ಗೌಸುಸಾಬ ಕುಬಸದ, ರಫೀಕ ಆದ್ರಳ್ಳಿ, ಬಾಬುಸಾಬ ಮಾಚೇನಹಳ್ಳಿ, ಜಕಾವುಲ್ಲಾ ಮಾಗಡಿ, ಇಸ್ಮಾಯಿಲ್ ನದಾಫ್, ರಿಯಾಜ ತಹಸೀಲ್ದಾರ, ಅಲ್ಲಾಭಕ್ಷಿ ನಗಾರಿ, ದಸ್ತಗೀರ ಜಂಗ್ಲಿ, ಎ.ಎಂ. ಢಾಲಾಯತ, ಐ.ಜಿ. ಅತ್ತಾರ, ಎಸ್.ಎಂ. ಮನಿಯಾರ, ನೂರುಲ್ಲುಶಾ ಮಕಾನದಾರ ಮುಂತಾದವರು ಉಪಸ್ಥಿತರಿದ್ದರು.

> ಇದೇ ಸಂದರ್ಭದಲ್ಲಿ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಪ್ರವಾದಿ ಮಹಮ್ಮದ ಪೈಗಂಬರ ಅವರ ಕುರಿತು ಹುಬ್ಬಳ್ಳಿಯ ಸಮಾರಂಭವೊಂದರಲ್ಲಿ ಅವಹೇಳನಕಾರಿಯಾಗಿ ಮಾತುಗಳನ್ನಾಡಿದ್ದು, ಇದು ಮುಸ್ಲಿಂ ಸಮುದಾಯದ ಜನರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟು ಮಾಡಿದೆ. ಇಂತಹ ಧಾರ್ಮಿಕ ಭಾವನೆಗಳನ್ನು ಕೆರಳಿಸುವಂತಹ ಭಾಷಣಕಾರರ ಮೇಲೆ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಳ್ಳಬೇಕೆಂದು ಶಿರಹಟ್ಟಿಯ ಅಹಲೆ ಸುನ್ನತ ವಲ್ ಜಮಾತ ಜಾಮಿಯಾ ಮಸ್ಜಿದ ವತಿಯಿಂದ ತಹಸೀಲ್ದಾರರ ಮೂಲಕ ಗೃಹ ಸಚಿವ ಜಿ. ಪರಮೇಶ್ವರ ಅವರಿಗೆ ಮನವಿ ಸಲ್ಲಿಸಲಾಯಿತು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಐಐಎಸ್‌ಸಿ, ಐಐಟಿ ಮತ್ತು ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಮತ್ತು ಮಶಿನ್ ಲರ್ನಿಂಗ್ ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ವೃತ್ತಿಪರ ಇಂಜನಿಯರಿಂಗ್ ಪದವೀಧರರಿಗೆ 15 ಸಾವಿರ ರೂ.ಗಳ ಶಿಷ್ಯವೇತನ ತರಬೇತಿ ನೀಡುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಕೊನೆಯ ದಿನ ಎಪ್ರಿಲ್ 25 ಆಗಿದ್ದು, ಅರ್ಜಿಯನ್ನು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ, ಗದಗ ಇಲ್ಲಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾದಚಾರಿಗೆ ಕಾರು ಡಿಕ್ಕಿ: ಮಹಿಳೆ ಸಾವು!

■ವಿಜಯಸಾಕ್ಷಿ ಸುದ್ದಿ, ಮುಂಬೈ

ಮಹಾರಾಷ್ಟ್ರದ ಛತ್ರಪತಿ ಸಂಭಾಜಿ ನಗರದ ಹೆದ್ದಾರಿಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಪಾದಚಾರಿ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ರಸ್ತೆ ದಾಟುತ್ತಿದ್ದ ಮಹಿಳೆಗೆ ಅತಿ ವೇಗವಾಗಿ ಬಂದ ಕಾರು ಡಿಕ್ಕಿಯಾಗಿ ಈ ದುರಂತ ಸಂಭವಿಸಿದೆ.

ಮಹಿಳೆ ತಲೆಯ ಮೇಲೆ ಮಡಕೆಯನ್ನು ಇಟ್ಟುಕೊಂಡು ರಸ್ತೆ ದಾಟುತ್ತಿದ್ದಳು. ಈ ವೇಳೆ ಕಾರು ವೇಗವಾಗಿ ಬಂದು ಮಹಿಳೆಗೆ ಡಿಕ್ಕಿಯಾಗಿದೆ. ಡಿಕ್ಕಿಯಾದ ರಭಸಕ್ಕೆ ಮಹಿಳೆ, ಕಾರಿಗಿಂತಲೂ ಎತ್ತರಕ್ಕೆ ಹಾರಿ, ರಸ್ತೆ ಮೇಲೆ ಬಿದ್ದಿದ್ದಾಳೆ. ಇದರಿಂದ ತೀವ್ರವಾಗಿ ಗಾಯಗೊಂಡಿದ್ದ ಆಕೆ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ.

## ಬಿಜೆಪಿ ‘ಜನಾಕ್ರೋಶ ಯಾತ್ರೆ’ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಎರಡು ವರ್ಷಗಳ ಹಿಂದೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಜೀವನಾವಶ್ಯಕ ವಸ್ತುಗಳ ಬೆಲೆ ಏರಿಸಿರುವುದನ್ನು ಖಂಡಿಸಿ, ಧರ್ಮದ ಆಧಾರದ ಮೇಲೆ ಸರ್ಕಾರಿ ಕಾಮಗಾರಿಗಳಲ್ಲಿ ಮೀಸಲಾತಿ ಕಲ್ಪಿಸಿರುವುದನ್ನು ವಿರೋಧಿಸಿ ಎಪ್ರಿಲ್ 22ರಂದು ಬೆಳಿಗ್ಗೆ 10 ಗಂಟೆಗೆ ಗದಗ ನಗರದಲ್ಲಿ ಜನಾಕ್ರೋಶ ಯಾತ್ರೆಯನ್ನು ಹಮ್ಮಿಕೊಂಡಿದೆ.

ನಗರದ ಬಸವೇಶ್ವರ ಸರ್ಕಲ್‌ನಿಂದ ಜನಾಕ್ರೋಶ ಯಾತ್ರೆ ಪ್ರಾರಂಭವಾಗಿ ಗಾಂಧಿ ಸರ್ಕಲ್‌ನಲ್ಲಿ ಬೃಹತ್ ಸಾರ್ವಜನಿಕ ಸಭೆಯ ಮೂಲಕ ಮುಕ್ತಾಯಗೊಳ್ಳಲಿದ್ದು, ಈ ಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವಾಯ್. ವಿಜಯೇಂದ್ರ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲುವಾದಿ




ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ, ಮಾಜಿ ಸಚಿವರುಗಳಾದ ಬಿ.ಶ್ರೀರಾಮುಲು, ಸಿ.ಸಿ. ಪಾಟೀಲ, ಕಳಕಪ್ಪ ಬಂಡಿ, ಶಾಸಕರಾದ ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ, ಮಹೇಶ ಟೆಂಗಿನಕಾಯಿ, ಎನ್. ರವಿಕುಮಾರ, ಹರೀಶ ಪೂಂಜಾ, ಪಿ.ರಾಜೀವ್, ಮುಖಂಡರಾದ ಅನಿಲ ಮೇಣಸಿನಕಾಯಿ, ಶರಣು ತಳ್ಳಿಕೇರಿ, ತಮ್ಮೇಶಗೌಡ, ಎಂ.ಎಸ್. ಕರೀಗೌಡ್ರ, ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಪಕ್ಕೀರೇಶ ರಟ್ಟಿಹಳ್ಳಿ ಭಾಗವಹಿಸಲಿದ್ದಾರೆ.

ಪಕ್ಷದ ಚುನಾಯಿತ ಪ್ರತಿನಿಧಿಗಳು, ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಆಗಮಿಸಿ ಜನಾಕ್ರೋಶ ಯಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ವಿನಂತಿಸಿದ್ದಾರೆ.

# ಎನ್‌ಎಂಎಂಎಸ್ ಹಾಜರಾತಿ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯೋಗ ಖಾತ್ರಿ ಯೋಜನೆಯಡಿ 2025–26ನೇ ಸಾಲಿನಿಂದ ಪ್ರತಿಯೊಬ್ಬ ಕೂಲಿಕಾರರಿಗೆ ದಿನಕ್ಕೆ 370 ರೂ. ಕೂಲಿ ಸಿಗಲಿದ್ದು, ಅಕುಶಲ ಕೂಲಿಕಾರರು ಯೋಜನೆಯ ಸದುಪಯೋಗ ಪಡೆಯಬೇಕು ಎಂದು ತಾ.ಪಂ ಸಹಾಯಕ ನಿರ್ದೇಶಕ (ಗ್ರಾ.ಉ) ಕುಮಾರ ಪೂಜಾರ ತಿಳಿಸಿದರು.

ತಾಲೂಕಿನ ಬೆಳಹೋಡ ಗ್ರಾಮದಲ್ಲಿ 2025–26ನೇ ಸಾಲಿನಲ್ಲಿ ನರೇಗಾ ಯೋಜನೆಯ ಸಮುದಾಯ ಬದು ನಿರ್ಮಾಣ ಕಾಮಗಾರಿ ಪರಿಶೀಲಿಸಿ ಅವರು ಮಾತನಾಡಿದರು.

ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿಗಳ ಹಾಜರಾತಿ ಕಡ್ಡಾಯವಾಗಿ ಎನ್‌ಎಂಎಂಎಸ್ ತಂತ್ರಾಂಶದಲ್ಲಿ ಪ್ರತಿದಿನ ಎರಡು ಬಾರಿ



ಅಳವಡಿಸಬೇಕು. ಕಳೆದ ವರ್ಷ ಪ್ರತಿ ದಿನಕ್ಕೆ 349 ರೂ. ಕೂಲಿ ಇತ್ತು. ಎಪ್ರಿಲ್ 1ರಿಂದ ಕೂಲಿ ಮೊತ್ತ 370ಕ್ಕೆ ಹೆಚ್ಚಳವಾಗಿದೆ. ಅಳತೆಗೆ ತಕ್ಕಂತೆ ಕೆಲಸ ಮಾಡಬೇಕು. ಅಳತೆಯಂತೆ ಕೆಲಸ ಮಾಡಿದರಷ್ಟೆ ಸಂಪೂರ್ಣ ಕೂಲಿ ಮೊತ್ತ ಸಿಗಲಿದೆ ಎಂದರು.

ಗ್ರಾಮೀಣ ಪ್ರದೇಶದ ಬಡ ಅಕುಶಲ ಕೂಲಿ ಕಾರ್ಮಿಕರಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸಲಾಗುತ್ತಿದೆ. ಕಂದಕ ಬದು ನಿರ್ಮಾಣ ಕಾಮಗಾರಿಯಿಂದ ರೈತರ ಜಮೀನಿನಲ್ಲಿ ಸುರಿದ ಮಳೆ ನೀರು ಮತ್ತು ಮಣ್ಣು ಹೊರ ಹೋಗದಂತೆ ತಡೆಯಬಹುದು. ಇದರಿಂದ ಅಂತರ್ಜಲ ಮಟ್ಟ ಹೆಚ್ಚಳವಾಗಲಿದೆ ಎಂದರು.

ಗ್ರಾಮೀಣ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಜೊತೆಯಾಗಿರುವ ಉದ್ಯೋಗ ಖಾತ್ರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ನರೇಗಾ ಯೋಜನೆಯಡಿ ಉದ್ಯೋಗ ಚೀಟಿ ಹೊಂದಿರುವ ಪ್ರತಿ ಕುಟುಂಬಕ್ಕೆ ವರ್ಷಕ್ಕೆ 100 ದಿನಗಳ ಕೆಲಸ ನೀಡಲಾಗುತ್ತಿದೆ. ಅರ್ಹ ಕುಟುಂಬಕ್ಕೆ 5 ಲಕ್ಷ ರೂ. ಮಿತಿಯೊಳಗೆ ವೈಯಕ್ತಿಕ ಕಾಮಗಾರಿ ಸೌಲಭ್ಯ ಪಡೆದುಕೊಳ್ಳಲು ಅವಕಾಶವಿದೆ. ಪುರುಷ– ಮಹಿಳೆ ಎಂಬ ಭೇದವಿರದೆ ಎಲ್ಲರಿಗೂ ಸಮಾನ ಕೂಲಿ ನೀಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಕಾರ್ಯದರ್ಶಿ ಮಹಾಲಿಂಗಯ್ಯ ಹಿರೇಮಠ, ತಾಂತ್ರಿಕ ಸಹಾಯಕ ಅಲ್ತಾಫ್ ಅಮ್ಮಿನಬಾವಿ, ಬಿಲ್ ಕಲೆಕ್ಟರ್ ಉಮೇಶ ಮುದಕವಿ, ಬಿಎಫ್‌ಟಿ ಮಂಜುನಾಥ ಬಂಡಿವಾಡ, ಜಿಕೆಎಂ ಪೃಥ್ವಿ ಗಟ್ಟೇನ್ನವರ, ಕಾಯಕ ಬಂಧುಗಳು, ಕೂಲಿಕಾರರು ಇದ್ದರು.

## ಸಾಕ್ಷಿ ಸುಭಾಷಿತ

ಅವರು ನನ್ನನ್ನು ಸಾಯಿಸಬಹುದು, ಆದರೆ ಅವರಿಗೆ ನನ್ನ ಆಲೋಚನೆಗಳನ್ನು ಸಾಯಿಸಲು ಸಾಧ್ಯವಿಲ್ಲ. ಅವರು ನನ್ನ ದೇಹವನ್ನು ಪುಡಿಪುಡಿ ಮಾಡಬಹುದು, ಆದರೆ ಅವರಿಗೆ ನನ್ನ ಆತ್ಮವನ್ನು ಪುಡಿ ಮಾಡಲು ಸಾಧ್ಯವಿಲ್ಲ

– ಭಗತ್ ಸಿಂಗ್

## ಸಂಪಾದಕೀಯ

# ಪ್ರಬುದ್ಧತೆ ಬೆಳೆಸಿಕೊಳ್ಳದ ನಾಯಕ ರಾಹುಲ್ ಗಾಂಧಿ

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರಬುದ್ಧತೆ ಬಗ್ಗೆ ಮತ್ತೊಮ್ಮೆ ಪ್ರಶ್ನೆ ಎದ್ದಿದೆ. ಅಮೆರಿಕ ಪ್ರವಾಸದಲ್ಲಿರುವ ರಾಹುಲ್ ಗಾಂಧಿ ಬೋಸ್ಟನ್ ನಲ್ಲಿ ನಡೆದ ಕಾರ್ಯಕ್ರಮ ಒಂದರಲ್ಲಿ ಭಾರತದ ಚುನಾವಣೆ ವ್ಯವಸ್ಥೆಯ ಬಗ್ಗೆ ಅನುಮಾನದ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

ಈ ರೀತಿ ವಿದೇಶದ ನೆಲದಲ್ಲಿ ದೇಶದ ವ್ಯವಸ್ಥೆಯ ಬಗ್ಗೆ ಟೀಕೆಗಳನ್ನು ಮಾಡುವುದು ಯಾವುದೇ ಪ್ರಬುದ್ಧ ನಾಯಕನ ಲಕ್ಷಣಗಳಲ್ಲ. ದೇಶದ ಚುನಾವಣೆ ವ್ಯವಸ್ಥೆಯಲ್ಲಿ ಲೋಪಗಳಿರುವದನ್ನ ಎಲ್ಲರೂ ಒಪ್ಪಿಕೊಳ್ಳುತ್ತಾರೆ. ಆದರೆ ಆ ಸಮಸ್ಯೆಯನ್ನು ನಾವೇ ಪರಿಹಾರ ಮಾಡಿಕೊಳ್ಳಬೇಕು. ಅದನ್ನ ವಿದೇಶಿಗರ ಮುಂದೆ ಹೇಳಿ ಭಾರತಕ್ಕೆ ಅವಮಾನವಾಗುವ ರೀತಿ ನಡೆದುಕೊಳ್ಳಬಾರದು.

ಈ ಹಿಂದೆಯೂ ಮೀಸಲಾತಿ ವ್ಯವಸ್ಥೆ ಕುರಿತು ವಿದೇಶದಲ್ಲಿ ಮಾತನಾಡಿ, ದೇಶದ ಜನರ ಆಕ್ರೋಶಕ್ಕೆ ಕಾರಣರಾಗಿದ್ದ ರಾಹುಲ್ ಗಾಂಧಿ, ಈಗ ಚುನಾವಣೆಯ ವ್ಯವಸ್ಥೆಯ ಬಗ್ಗೆ ಮಾತನಾಡಿ ಮತ್ತೊಮ್ಮೆ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ವಿದೇಶದ ಹಲವ ನಾಯಕರು ಭಾರತದ ಬಗ್ಗೆ ಮೆಚ್ಚುಗೆಯ ಮಾತನಾಡುತ್ತಿರುವಾಗ, ನಮ್ಮವರೇ ನಮ್ಮ ವಿರುದ್ಧವಾಗಿ ಮಾತನಾಡುವಂತಾಗಿದೆ. ಅದರಲ್ಲೂ ಮಹಾರಾಷ್ಟ್ರ ಚುನಾವಣೆ ಬಗ್ಗೆ ಮಾತನಾಡಿರುವ ರಾಹುಲ್ ಗಾಂಧಿ, ಕರ್ನಾಟಕ ಚುನಾವಣೆಯನ್ನ ಬಿಟ್ಟು ಮಾತನಾಡಿರುವುದು, ವಿದೇಶದಲ್ಲೂ ರಾಜಕಾರಣ ಮಾಡುತ್ತಿರುವುದು ಸ್ಪಷ್ಟವಾಗಿದೆ.

ಭವಿಷ್ಯದ ದಿನಗಳಲ್ಲಾದರೂ ರಾಹುಲ್ ಗಾಂಧಿ ಪ್ರಬುದ್ಧತೆ ಪ್ರದರ್ಶಿಸಲಿ ಎನ್ನುವ ಆಶಯ ಕಾಂಗ್ರೆಸ್ ನಾಯಕರೇ ವ್ಯಕ್ತಪಡಿಸಿದ್ದಾರೆ. ಆದರೆ ಆ ರೀತಿಯ ಮಾತುಗಳು ರಾಹುಲ್ ಗಾಂಧಿ ಅವರಿಂದ ಬರುತ್ತಿಲ್ಲ. ಸುಧಾರಣೆಗೆ ಇನ್ನು ಅವಕಾಶವಿದೆ.

## 2023ನೇ ಸಾಲಿನ ರಾಜ್ಯಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಭಾಜನರಾದ ನಿಮಿತ್ತ ಲೇಖನ

# ಬಯಲ ಬೆಳಕಿನ ಕವಿ ಎ.ಎಸ್. ಮಕಾನದಾರ

ನೋವಿನ ಸೆಳಕಿನಲ್ಲಿಯೇ ಒಸರುವ ಅದಮ್ಯ ಜೀವನ ಪ್ರೀತಿ. ಬಡತನದ ಬದುಕಿನಲ್ಲಿ ದೊರೆತ ಶ್ರೀಮಂತ ಅನುಭವಗಳ ಬುತ್ತಿ. ಬದುಕಿನ ಬಂಡಿಯ ಸಾಗಿಸಿ ತುತ್ತಿನ ಚೀಲವ ತುಂಬಿಸಲು ಮಾಡಿದ ಹತ್ತು ಹಲವು ಕೆಲಸಗಳು ಹೊಟ್ಟೆ ತುಂಬಿಸಿದ್ದಕ್ಕಿಂತ ತಲೆಯಲ್ಲಿ ಬದುಕಿನ ವೈವಿಧ್ಯಮಯ ಆಯಾಮಗಳ ವಿವಿಧ ವಿಚಾರಗಳನ್ನು ಭಾವಕೋಶದಲ್ಲಿ ತುಂಬಿಸಿಕೊಂಡವರು. ಸಾಹಿತ್ಯದ ಭಂಡಾರವನ್ನು ಓದಿ ಹೊಸ ವಿಷಯಗಳನ್ನು ಅರಿತು ಕಥೆ, ಕವನಗಳ ರಚನೆಗೆ ಹಾದಿಯನ್ನು ತೋರಿ ಮಸ್ತಕವನ್ನು ತುಂಬಿದ್ದ ಹತ್ತು ಹಲವು ವಿಷಯ ವೈವಿಧ್ಯಗಳು...

ಬರೆದಿದ್ದಕ್ಕಿಂತ ಬರೆಸಿದ್ದೇ ಹೆಚ್ಚು ಎಂಬಂತೆ ಪ್ರೋತ್ಸಾಹಿಸುವ ವ್ಯಕ್ತಿತ್ವ, ಜೀವ ಭಾವಗಳ ತಂತಿಯನ್ನು ನುರಿತ ವೈಣಿಕನಂತೆ ಮಿಡಿದು ಜನರಿಗೆ ಸಾಹಿತ್ಯ ಸುಧೆಯನ್ನು ತುಂಬಿಕೊಟ್ಟವರು, ಸಾಹಿತ್ಯ ಪ್ರಕಾಶನ ಸಂಸ್ಥೆಯನ್ನು ಕಟ್ಟಿ, ಎಲ್ಲರ ಅಕ್ಕರೆಯ ಸಕ್ಕರೆಯ ಬಯಲ ಬೆಳಕಿನ ಸಾಹಿತಿ, ಅಕ್ಕಡಿ ಸಾಲಿನ ಕವಿ ಎಂದೇ ಖ್ಯಾತರಾಗಿರುವ ಕಥೆಗಾರ, ಅಂಕಣ ಬರಹಗಾರ, ಪ್ರಕಾಶನಕಾರ, ಸಂಪಾದಕ, ಉಪನ್ಯಾಸಕ ಹೀಗೆ ಹತ್ತು ಹಲವು ಉಪಾದಿಗಳನ್ನು ತಮ್ಮ ಸಾಹಿತ್ಯ ಸೇವೆಯ ಕಿರೀಟದ ಗರಿಗೆ ಸೇರಿಸಿಕೊಂಡವರು ಎ.ಎಸ್. ಮಕಾನದಾರ.

ಮಾನವೀಯ ಸೂಕ್ಷ್ಮ ಸಂವೇದನೆಗಳನ್ನು ಹೊಂದಿದ, ಬದುಕಿನ ಕುರಿತು ಭವ್ಯವಾದ ಕನಸುಗಳನ್ನು ಹೊತ್ತು ಪ್ರೀತಿ–ಪ್ರೇಮ, ಜೀವ–ಭಾವಗಳ ಶುದ್ಧ ಅಂತಃಕರಣವನ್ನು ಓದುಗ ದೊರೆಗಳಿಗೆ ಕಲ್ಪಿಸಿಕೊಟ್ಟ, ತಾನು ಬಡತನವನ್ನು ಉಂಡರೂ ಅದರ ಬೇಗೆಯನ್ನು ತೋರದೆ ಸಾಹಿತ್ಯದ ಮೂಲಕ ಮೃಷ್ಟಾನ್ನದ ಸವಿಯನ್ನು ಉಣ ಬಡಿಸಿದವರು ಮಕಾನದಾರ.



ಗಜೇಂದ್ರಗಡದ ರಾಯಬಾಗಿ ಸಹೋದರರು ಮತ್ತು ಚಾವಡಿಮನೆ ಅವರ ಫ್ಯಾಕ್ಟರಿಯಲ್ಲಿ ಸೀರೆಗೆ ನೂಲು ಹಚ್ಚುವ, ನೂಲಿಗೆ ಬಣ್ಣ ಹಾಕುವ, ಕಂಡಿಕೆ ಮಾಡುವ ವೈಪಣಿ ಮಾಡುವ ಸೀರೆಯನ್ನು ಘಳಿಗೆ ಮಾಡಿ ಮಡಚುವ ಕೆಲಸಗಳನ್ನು ಕಲಿಯುತ್ತಾ ಮಾಡುತ್ತಾ ತಮ್ಮ ಬದುಕಿನ ಬವಣೆಯ ಹತ್ತು ಹಲವು ಚಿತ್ತಾರಗಳ ಒಂದೊಂದಾಗಿ ಜೋಡಿಸಿ ನಯವಾಗಿ ಹೊಂದಿಸಿ ಸುಂದರವಾಗಿ ನೇಯುತ್ತಾ ಚಂದದ ಬದುಕನ್ನು ಘಳಿಗೆ ಮಾಡಿ ಕಟ್ಟಿಕೊಂಡು ಸದ್ದಿಲ್ಲದ ಸಾಧನೆಯ ಮೂಲಕ, ತಮ್ಮ ಸಾಧನೆ ಅಂದ ಚಂದವನ್ನು ಜಗತ್ತಿಗೆ ಉಣ ಬಡಿಸುತ್ತಿರುವ ಮಕಾನದಾರರ ಜೀವನ ಪ್ರೀತಿ ಅಪಾರ.

ಹೀಗೆ ಬದುಕು ತನ್ನತ್ತ ಎಸೆದ ಎಲ್ಲ ಮೊನಚು ಬಾಣಗಳನ್ನು ಆಯ್ದು ತಮ್ಮ ಬತ್ತಳಿಕೆಯಲ್ಲಿ ಇರಿಸಿಕೊಂಡು ಬದುಕಿನ ವೈವಿಧ್ಯಮಯ ಅನುಭವಗಳು ಕಟ್ಟಿಕೊಟ್ಟ ಎಂದೂ ಮುಗಿಯದ ಬುತ್ತಿಯನ್ನು ಕಥೆ, ಕವನ, ಲೇಖನಗಳ ಮೂಲಕ ಸುಂದರವಾದ ಸಾಹಿತ್ಯವಾಗಿಸಿ ಅದರ ರಸದೌತಣವನ್ನು ಸಾಹಿತ್ಯಾಸಕ್ತರಿಗೆ ಉಣಬಡಿಸಿದ್ದಾರೆ. ತಮ್ಮ ಬದುಕಿನ ಗಾಢ ಅನುಭವದ ಸಾರವನ್ನು ವೈವಿಧ್ಯಮಯ ಸಾಹಿತ್ಯಕ ಹಿನ್ನೆಲೆಗಳಲ್ಲಿ ಒದಗಿಸಿರುವ ಮಕಾನದಾರರು ಮಾನವೀಯ ಮೌಲ್ಯಗಳನ್ನು ಬಿತ್ತುವ, ಮೃದು ಮತ್ತು ಮಿತ ಭಾಷಿಯಾದ ಭರವಸೆಯ ಬರಹಗಾರರಾಗಿ ರೂಪುಗೊಂಡರು.

ಇವರು ತಮ್ಮ ಶಿಕ್ಷಕರಾದ ಕೆ.ಎಸ್. ಗಾರವಾಡ ಹಿರೇಮಠ ಅವರ ಮಾರ್ಗದರ್ಶನದಲ್ಲಿ ಉದ್ಯೋಗ ವಿನಿಮಯ ಕಚೇರಿಯಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಸಿದರು. ಮುಂದೆ ಕಾಲೇಜು ವಿದ್ಯಾಭ್ಯಾಸವನ್ನು ಪೂರೈಸಿದ ನಂತರ ಪ್ರತಿ ನೌಕರಿಯ ಸಂದರ್ಶನಕ್ಕೆ ಹೋಗಲು ಹಾಸ್ಟೆಲ್‌ನ ಅಡುಗೆಯವರಾಗಿದ್ದ ಎನ್.ಎಸ್. ಪಾಟೀಲ ಎತ್ತಿನ ಗುಡ್ಡ, ಸಹೋದರಿ ಸ್ವರೂಪ ರೇಣುಕಾ ಮಾದಗುಂಡಿ ಮತ್ತು ಇನ್ನೋರ್ವ ಹಿರಿಯ ಸ್ನೇಹಿತ ಉಡಚಪ್ಪ ಆರ್.ಚನ್ನಮ್ಮನವರ್ ಸಹಾಯ, ಮಾರ್ಗದರ್ಶನಗಳನ್ನು ಮರೆಯಲು ಸಾಧ್ಯವಿಲ್ಲ ಎಂದು ನೆನೆಯುತ್ತಾರೆ.

ಹದಿಮೂರು ಸ್ವತಂತ್ರ ಕೃತಿಗಳನ್ನು ಇಪ್ಪತ್ತೆರಡು ಸಂಪಾದಿತ ಕೃತಿಗಳನ್ನು ರಚಿಸಿರುವ ಮಕಾನದಾರರು ಪ್ರೀತಿ ಪ್ರೇಮ, ಭಗ್ನತೆ, ವಿರಹ ತಾಯಿ, ಬಡತನಗಳ ಕುರಿತು ರಚಿಸಿರುವ ಹಲವಾರು ಕವನಗಳು ಸಹೃದಯರ ಮನಸ್ಸನ್ನು ಸೆಳೆದಿದೆ. ಭಗ್ನ ಪ್ರೇಮವನ್ನು ಹೀಗೂ ವರ್ಣಿಸಬಹುದೇ ಎಂಬ ಭಾವವನ್ನು ಮೂಡಿಸಿವೆ. ತನ್ನೊಳಗಿನ ನೋವನ್ನು ಹಸಿರಾಗಿಸುವ ಪುಟ್ಟ ಹನಿಗವಿತೆಗಳನ್ನು ನೇಯ್ದಿರುವ ಕವಿಯ ಜಾಣ್ಮೆಯನ್ನು ಎಷ್ಟು ಹೊಗಳಿದರೂ ಸಾಲದು.

ಎದೆಯ ಸುಡುವ ನೆನಪುಗಳು, ಸಖೀ ಸಖ, ಕೆಳಗಲ ಮನಿ ಮಾಬವ್ವ ಮತ್ತು ಇತರ ಕವಿತೆಗಳು, ಒಂದು ಮೌನದ ಬೀಜ, ಅಕ್ಕಡಿ ಸಾಲು, ಮೂರು ದಶಕದ ಕಾವ್ಯ, ಪ್ಯಾರಿ ಪದ್ಯ, ದರ್ವೇಶಿ ಪದ್ಯ, ಉಸಿರ ಗಂಧ ಸೋಕಿ ಇವುಗಳು ಮಕಾನದಾರರ ಕಾವ್ಯ ಸಂಕಲನಗಳಾಗಿವೆ.

ಬದುಕಿನ ಬವಣೆಗಳ ಒಟ್ಟು ಮೊತ್ತವನ್ನು ಅನುಭವಿಸುತ್ತಲೇ ಸುಂದರವಾದ ಸಾಹಿತ್ಯಕ ಬದುಕನ್ನು ಕಟ್ಟಿಕೊಂಡವರು ಮಕಾನದಾರರು. ಬದುಕಿನಲ್ಲಿ ಆದರ್ಶಗಳನ್ನು ಇಟ್ಟುಕೊಂಡು ಹೊಸ ಸಮಾಜವನ್ನು ಕಟ್ಟುವ ನಿಟ್ಟಿನಲ್ಲಿ ಸಾಹಿತ್ಯ ಸೃಷ್ಟಿಸಿದ ಮಕಾನದಾರರು. ಹಲವಾರು ಒತ್ತಡಗಳ ನಡುವೆಯೂ ಮೌಲ್ಯಗಳೊಂದಿಗೆ ರಾಜಿಯಾಗದೆ ತಮ್ಮತನವನ್ನು ಬಿಟ್ಟುಕೊಡದೆ ಸೃಜನಶೀಲ ವ್ಯಕ್ತಿತ್ವವನ್ನು ಹಾಸಿ ಹೊದ್ದುಕೊಂಡವರು. ಮಕಾನದಾರರು ಕೇವಲ ತಾವು ಮಾತ್ರ ಬೆಳೆಯಲಿಲ್ಲ, ತಮ್ಮ ಸುತ್ತ ಇರುವವರನ್ನು ಪ್ರೋತ್ಸಾಹಿಸಿ ಬೆನ್ನು ತಟ್ಟಿ ಬರೆಸಿ ಬೆಳೆಸಿದರು. ಅವರ ಲೇಖನಗಳನ್ನು ಪ್ರಕಾಶನ ಸಂಸ್ಥೆಯ ಮೂಲಕ ಹೊರ ತಂದರು.

ಬೆಳಕಿನ ಹಾಡು, ಸೌಹಾರ್ದ ಸಂಗಮ, ಬೊಗಸೆ ತುಂಬಾ ಬಯಲು, ಕತ್ತಲೂರಿನ ಬೆಳಕು (ರಾಜ್ಯಮಟ್ಟದ ಪ್ರಾತಿನಿಧಿಕ ಕಥಾ ಸಂಕಲನಗಳು), ಅಲಿಯವರ ಮಕ್ಕಳ ನೀತಿ ಕಥೆಗಳು ಸಂಪಾದಿತ ಕೃತಿಗಳಾಗಿವೆ. ಮನುಷ್ಯ ಪ್ರೇಮ ಕದ ತೆರೆಯುವ ಹೊತ್ತಿಗೆ ( ವಿಮರ್ಶೆ), ಸೂಫಿ ಸಾಹಿತ್ಯ (ಅಭಿನಂದನಾ ಗ್ರಂಥ)ಗಳನ್ನು ಕೂಡ ಸಂಪಾದಿಸಿದ್ದಾರೆ.

ನಿರಂತರ ಪ್ರಕಾಶನವನ್ನು ಆರಂಭಿಸಿರುವ ಮಕಾನದಾರರು ಯುವ ಬರಹಗಾರರ ಪುಸ್ತಕಗಳನ್ನು ಪ್ರಕಟಿಸಿ ಪ್ರೋತ್ಸಾಹಿಸಿದ್ದಾರೆ. ಮಕಾನದಾರ ಸಾಹಿತ್ಯ ಪ್ರತಿಷ್ಠಾನವನ್ನು ಸ್ಥಾಪಿಸಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಗುರುತಿಸಿ ಸನ್ಮಾನಿಸಿದ್ದಾರೆ. ವಿಶೇಷವಾಗಿ ಸೂಫಿ ಸಂತರ ಕುರಿತ ಹಲವಾರು ಉಪನ್ಯಾಸಗಳನ್ನು ಮಾಡಿರುವ ಮಕಾನದಾರ ಅವರು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಉಪಾಧ್ಯಕ್ಷರಾಗಿಯೂ ಕಾರ್ಯ ನಿರ್ವಹಿಸಿದ್ದಾರೆ. ಇವರ ಸಾಹಿತ್ಯ ಸೇವೆಯನ್ನು ಗುರುತಿಸಿ ಸಂಕ್ರಮಣ ಪ್ರಶಸ್ತಿ, ಜಿಲ್ಲಾ ಸರ್ವೋತ್ತಮ ಪ್ರಶಸ್ತಿ, ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ರಾಜ್ಯಮಟ್ಟದ ಅಣಿಮಾನಂದ ಸದ್ಭಾವನ ಸಾಹಿತ್ಯ ಪ್ರಶಸ್ತಿ, ಸಂತ ಶಿಶುನಾಳ ಭಾವೈಕ್ಯತಾ ಪುರಸ್ಕಾರ, ಕರುನಾಡ ಸಿರಿ ರಾಷ್ಟ್ರೀಯ ಯುವ ಸಂಸ್ಕೃತಿ ಅಕಾಡೆಮಿ ಪುರಸ್ಕಾರ, ವೀರರಾಣಿ ಕಿತ್ತೂರು ಚೆನ್ನಮ್ಮ ಪ್ರಶಸ್ತಿ, ಸುವರ್ಣ ಕರ್ನಾಟಕ ಪ್ರಶಸ್ತಿ, ಕರುನಾಡ ಪದ್ಮಶ್ರೀ ಮುಂತಾದ ಪ್ರಶಸ್ತಿಗಳು ಇವರ ಮಡಿಲನ್ನು ಸೇರಿವೆ.

ಸಾಮಾಜಿಕ ಸೇವೆಯಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಮಕಾನದಾರರು ಕಳೆದ ಏಳು ತಿಂಗಳಿಂದ ಪ್ರತಿ ವಾರ ಹಲವು ಜನರಿಗೆ ಊಟದ ಕಿಟ್‌ಗಳನ್ನು ನ್ಯಾಯವಾದಿ ಎಸ್.ಕೆ. ನದಾಫ್, ಎಂ.ಜಿ. ಮುಲ್ಲಾ, ಧರ್ಮ ಗುರುಗಳಾದ ರಫೀಕ್ ಮೌಲಾನ ರಾಜೇಸಾಬ್ ಅಣ್ಣಿಗೇರಿ ಮತ್ತು ಮಕ್ತುಮ್ ಜೋಹರಂ ಅವರ ಮಾರ್ಗದರ್ಶನ, ಸಹಕಾರದೊಂದಿಗೆ ನಿರಂತರವಾಗಿ ವಿತರಿಸುವ ಕಾರ್ಯದಲ್ಲಿ ಕೈ ಜೋಡಿಸಿದ್ದಾರೆ.

ಇದೀಗ ಅತ್ಯುತ್ತಮವಾಗಿ ಕರ್ತವ್ಯವನ್ನು ನಿರ್ವಹಿಸಿರುವ ರಾಜ್ಯ ಸರಕಾರಿ ನೌಕರರಿಗೆ ನೀಡುವ 2023ನೇ ಸಾಲಿನ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯು ಮಕಾನದಾರರಿಗೆ ಲಭಿಸಿದ್ದು ಅರ್ಹತೆಗೆ ಸಂದ ಗೌರವವಾಗಿದೆ. ಅವರ ಸಾಹಿತ್ಯಕ ಮತ್ತು ವೈಯುಕ್ತಿಕ ಸಾಧನೆಗಳು ಹೀಗೆ ನಿತ್ಯ ನಿರಂತರವಾಗಿ ನಡೆಯುತ್ತಿರಲಿ ಎಂದು ಹಾರೈಸುವ...

– ವೀಣಾ ಹೇಮಂತ್‌ಗೌಡ ಪಾಟೀಲ್,
ಮುಂಡರಗಿ.

## ಡಾ. ಬಾಬಾಸಾಹೇಬ ಅಂಬೇಡ್ಕರರ ಜಯಂತಿ ಪ್ರಯುಕ್ತ ವಿಚಾರಗೋಷ್ಠಿ ಉದ್ಘಾಟಿಸಿದ ಮಾಜಿ ಸಚಿವ ಎನ್. ಮಹೇಶ

# ಸಂವಿಧಾನವನ್ನು ತಿದ್ದಿ ಅವಮಾನಿಸಿದ್ದು ಕಾಂಗ್ರೆಸ್

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೇಂದ್ರ ಸರಕಾರದಲ್ಲಿ ಸಚಿವರಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚನಾ ಪ್ರಕ್ರಿಯೆ ಕರಡು ಸಿದ್ಧತಾ ಸಮಿತಿಯ ಅಧ್ಯಕ್ಷರೂ ಆಗಿದ್ದ ವೇಳೆಯಲ್ಲಿಯೇ 'ಕಾಂಗ್ರೆಸ್ ಒಂದು ಸುಡುವ ಮನೆ ಎಚ್ಚರಿಕೆ' ಎಂದು ಅವರು ನೀಡಿದ ಹೇಳಿಕೆ ಅಕ್ಷರಶಃ ಸತ್ಯವಾಗಿದೆ. ಏಕೆಂದರೆ ಕಾಂಗ್ರೆಸ್ ಅವರನ್ನು ಅಷ್ಟೊಂದು ಕೆಟ್ಟದಾಗಿ ನಡೆಸಿಕೊಂಡು ಸಾಕಷ್ಟು ನೋವು, ಅವಮಾನವನ್ನು ನೀಡಿತ್ತು ಎಂದು ಮಾಜಿ ಶಿಕ್ಷಣ ಸಚಿವ ಎನ್. ಮಹೇಶ ಹೇಳಿದರು. ಅವರು ಶನಿವಾರ ಪಟ್ಟಣದ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿ ವತಿಯಿಂದ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ 134ನೇ ಜಯಂತಿ ಪ್ರಯುಕ್ತ ವಿಚಾರಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.



1948ರಲ್ಲಿ ಸಚಿವರಾಗಿದ್ದ ಸಂದರ್ಭದಲ್ಲಿ ಈ ಹೇಳಿಕೆ ಕೊಟ್ಟಿದ್ದು, ಇದು ಆತುರದ ಅಥವಾ ನಿರ್ಲಕ್ಷ್ಯದ ಹೇಳಿಕೆಯಲ್ಲ. ಇದು ಪ್ರಜ್ಞಾಪೂರ್ವಕ, ಚಿಂತನೆಯಿಂದ ನೀಡಿದ ಹೇಳಿಕೆ. ಸಂವಿಧಾನವನ್ನು ತಿದ್ದಿ ಅವಮಾನಿಸಿದ್ದು ಕಾಂಗ್ರೆಸ್‌ನವರೇ ಹೊರತು ಬಿಜೆಪಿಯವರಲ್ಲ. ಜನರ ಮೂಲಭೂತ ಹಕ್ಕುಗಳನ್ನು ಕಿತ್ತು–ಕೊಂಡಿದ್ದು ಕಾಂಗ್ರೆಸ್‌ನವರು. ನರೇಂದ್ರ ಮೋದಿಯವರು ಹಿಂದುಳಿದ ಪರ ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಪರ ಒಟ್ಟು 22 ತಿದ್ದುಪಡಿಗಳನ್ನು ಮಾಡಿದ್ದಾರೆ. ಕಾಂಗ್ರೆಸ್‌ನವರು ಸಂವಿಧಾನವನ್ನು ತಿದ್ದುಪಡಿ ಮಾಡಿದರೂ ಸಹ ಇದರಲ್ಲಿ ಪರಿಶಿಷ್ಟ ಜಾತಿ/ಪಂಗಡವರಿಗೆ ಏನೂ ಮಾಡಿಲ್ಲ. ಇದರಿಂದ ಕಾಂಗ್ರೆಸ್ ಸಂವಿಧಾನವನ್ನು ತಿದ್ದಿ ಡಾ.ಅಂಬೇಡ್ಕರ್ ಅವರನ್ನು ಅವಮಾನಿಸಿದೆ ಎಂದು ಆರೋಪಿಸಿದರು. ಹಿರಿಯ ಮುಖಂಡ ಡಾ. ಕ್ರಾಂತಿಕಿರಣ ಮತ್ತು ಪರಿವಾರದ ಪ್ರಮುಖ ವಾದಿರಾಜ್ ಮಾತನಾಡಿ, ಕಾಂಗ್ರೆಸ್ ಪಕ್ಷವು ಸ್ವಾತಂತ್ರ್ಯಪೂರ್ವ ಮತ್ತು ಸ್ವಾತಂತ್ರ್ಯಾನಂತರವೂ ಅಂಬೇಡ್ಕರರಿಗೆ ಮತ್ತು ದಲಿತರಿಗೆ ನಿರಂತರವಾಗಿ ಮೋಸ ಮಾಡುತ್ತಾ ಬರುತ್ತಿದೆ. ದಲಿತರನ್ನು ಅವತ್ತು ಮತ ಬ್ಯಾಂಕ್ ಆಗಿ ಬಳಸಿಕೊಂಡು, ಅದೇ ಚಾಳಿಯನ್ನು ಇವತ್ತಿಗೂ ಮುಂದುವರೆಸಿದೆ ಎಂದು ಆರೋಪಿಸಿದರು.

ಶಾಸಕ ಡಾ. ಚಂದ್ರು ಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಹಿರಿಯ ಮುಖಂಡರಾದ ರವಿ ದಂಡಿನ, ಬಿಜೆಪಿ ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಬಸವರಾಜ ಚಕ್ರಸಾಲಿ, ಗಂಗಾಧರ ಮೆಣಸಿನಕಾಯಿ, ಮೋಹನ್ ಗುತ್ತೆಮ್ಮನವರ, ಗಿರೀಶ ಚೌರಡ್ಡಿ, ಜಾನು ಲಮಾಣಿ ಮುಂತಾದವರಿದ್ದರು. ಮಂಡಳ ಕಾರ್ಯದರ್ಶಿ ಅನಿಲ ಮುಳಗುಂದ ಸ್ವಾಗತಿಸಿದರು. ಪ್ರವೀಣ ಪಾಟೀಲ ನಿರೂಪಿಸಿದರು.

ಕಾಂಗ್ರೆಸ್ ಪಕ್ಷವು ತನ್ನ ನಾಯಕರಿಗೆ ಹಲವು ಬಾರಿ ಭಾರತರತ್ನ ನೀಡಿದೆ. ಆದರೆ ಬಾಬಾ ಸಾಹೇಬರಿಗೆ ನೀಡಲಾಗಲಿಲ್ಲ. ಏಕೆಂದರೆ ಇವರ ಮೇಲೆ ಕಾಂಗ್ರೆಸ್‌ಗೆ ಯಾವುದೇ ಪ್ರೀತಿ, ಗೌರವ ಇರಲಿಲ್ಲ. ಕಾಂಗ್ರೆಸ್ ಸರಕಾರವು ಮೊದಲಿನಿಂದಲೂ ಜನರಿಗೆ ಸುಳ್ಳು ಹೇಳುತ್ತಾ ಬಂದಿದೆ. ಜೈ ಭೀಮ್ ಎಂದು ಹೇಳುವ ಹಕ್ಕು ಕಾಂಗ್ರೆಸ್‌ನವರಿಗೆ ಇಲ್ಲ. ಭಾರತೀಯ ಜನತಾ ಪಾರ್ಟಿ ಡಾ. ಬಿ.ಆರ್. ಅಂಬೇಡ್ಕರರ ವಿಚಾರ–ಹೋರಾಟಕ್ಕೆ ಮನ್ನಣೆ ನೀಡುವ ಉದ್ದೇಶದಿಂದ ಎಪ್ರಿಲ್ 14ರಿಂದ ಎ.25ರವರೆಗೆ ವಿಚಾರಗೋಷ್ಠಿ ಯಾತ್ರೆ ಕೈಗೊಂಡಿದೆ ಎಂದು ಎನ್. ಮಹೇಶ ಹೇಳಿದರು.

# ರಾಜಗೋಪಾಲ ಡಿ.ಕಡ್ಲಿಕೊಪ್ಪ ದಂಪತಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿಜಯನಗರ ಬಡಾವಣೆಯಲ್ಲಿರುವ ಶ್ರೀವಿಶ್ವಕರ್ಮ ಭವನದ ಕಲಾ ತಪಸ್ವಿ ದಿ. ಟಿ.ಪಿ. ಅಕ್ಕಿ ವೇದಿಕೆಯಲ್ಲಿ, ನಿವೃತ್ತ ಪ್ರಾಚಾರ್ಯ ರಾಜಗೋಪಾಲ ಡಿ.ಕಡ್ಲಿಕೊಪ್ಪ ಅಭಿಮಾನಿ ಬಳಗ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ರಾಜಗೋಪಾಲ ಡಿ.ಕಡ್ಲಿಕೊಪ್ಪ–ಲಕ್ಷ್ಮೀ ಕಡ್ಲಿಕೊಪ್ಪ ದಂಪತಿಗಳನ್ನು ಸನ್ಮಾನಿಸಲಾಯಿತು.

ಬಾಗಲಕೋಟೆಯ ಮಳೆ ರಾಜೇಂದ್ರ ಮುರನಾಳ ಕ್ಷೇತ್ರ ಮಠದ ಶ್ರೀ ಮಳೆರಾಜೇಂದ್ರಸ್ವಾಮಿ ಮಹಾಪುರುಷ ಸ್ವಾಮೀಜಿ ಹಾಗೂ ಯಾದಗಿರಿಯ ಶಹಪುರದ ಶ್ರೀವಿಶ್ವಕರ್ಮ ಏಕದಂಡಗಿ ಮಠದ ಶ್ರೀ ಕಾಳಹಸ್ತೇಂದ್ರ ಮಹಾಸ್ವಾಮೀಜಿ, ಪ್ರಾ. ಅಶೋಕ ಟ.ಅಕ್ಕಿ, ಡಾ. ಕೆ.ಪಿ. ಈರಣ್ಣ, ಡಾ. ಜಿ.ಬಿ. ಪಾಟೀಲ, ಪ್ರೊ. ಸಿದ್ದು ಯಾಪಲಪರವಿ, ಪ್ರಾ. ಉಮೇಶ ಪುರದ, ಡಾ. ಎಸ್.ಡಿ. ಯರಗೇರಿ, ಮೌನೇಶ ಸಿ.ಬಡಿಗೇರ(ನರೇಗಲ್ಲ), ವಿಶ್ವನಾಥ ಕಮ್ಮಾರ, ವಿಜಯ ಕಿರೇಸೂರ ಸೇರಿದಂತೆ ಕಡ್ಲಿಕೊಪ್ಪ ಕುಟುಂಬದ ಸದಸ್ಯರು ವೇದಿಕೆಯಲ್ಲಿದ್ದರು.

# ದುಷ್ಕರ್ಮಿಗಳನ್ನು ಪತ್ತೆಹಚ್ಚಿ ಶಿಕ್ಷೆ ನೀಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಯ ಕರ್ನಾಟಕ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಮುತ್ತಪ್ಪ ರೈ ಅವರ ಪುತ್ರ ರಿಕ್ಕಿ ರೈ ಮೇಲೆ ನಡೆದಿರುವ ಗುಂಡಿನ ದಾಳಿಕೋರರನ್ನು ಪತ್ತೆ ಹಚ್ಚಿ ಅವರಿಗೆ ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿ ಸೋಮವಾರ ತಾಲೂಕು ಜಯ ಕರ್ನಾಟಕ ಸಂಘಟನೆ ಕಾರ್ಯಕರ್ತರು ತಹಸೀಲ್ದಾರರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಸಂಘಟನೆಯ ತಾಲೂಕು ಘಟಕದ ಅಧ್ಯಕ್ಷ ರಮೇಶ ಹಂಗನಕಟ್ಟಿ ಮಾತನಾಡಿ, ರಿಕ್ಕಿ ರೈ ಮೇಲೆ ಮಧ್ಯರಾತ್ರಿ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದಾರೆ. ಈ ಘಟನೆ ಬಿಡದಿಯ ಮುತ್ತಪ್ಪ ರೈ ಅವರ ನಿವಾಸದ ಮುಂದೆಯೇ ಜರುಗಿದೆ. ರಿಕ್ಕಿ ರೈ ವಿಶೇಷವಾಗಿ ತಾವೇ ಕಾರನ್ನು ಚಲಾಯಿಸುತ್ತಿರುವುದನ್ನು ಅರಿತಿದ್ದ ದುಷ್ಕರ್ಮಿಗಳು ಡ್ರೈವಿಂಗ್ ಸೀಟನ್ನೇ ಗುರಿಯಾಗಿಸಿ ಮೂರು ಸುತ್ತು ಗುಂಡು ಹಾರಿಸಿದ್ದಾರೆ. ಆದರೆ ಈ ಬಾರಿ ಕಾರನ್ನು ಚಾಲಕ ರಾಜು ಚಲಾಯಿಸುತ್ತಿದ್ದರು. ಆದರೆ ಅವರು ಮುಂದೆ ಬಾಗಿದ ಪರಿಣಾಮ ಗುಂಡೇಟಿನಿಂದ ಪಾರಾಗಿದ್ದಾರೆ. ಆದರೆ ಪಕ್ಕದ ಸೀಟಿನಲ್ಲಿದ್ದ ರಿಕ್ಕಿ ರೈ ಅವರ ಮೂಗು ಮತ್ತು ಕೈಗೆ ಗುಂಡು ತಗುಲಿದ್ದು, ಗಂಭೀರವಾಗಿ ಗಾಯಗೊಂಡಿದ್ದಾರೆ. ಈ ಘಟನೆಯಿಂದ ಸಾರ್ವಜನಿಕರಲ್ಲಿ ಭಯ ಆವರಿಸಿದೆ. ಕಾರಣ ಗುಂಡಿನ ದಾಳಿ ಮಾಡಿದವರನ್ನು ಪತ್ತೆ ಹಚ್ಚಿ ಶಿಕ್ಷಿಸಬೇಕು ಎಂದು ಹೇಳಿದರು. ಸಂಘಟನೆಯ ಗೌರವಾಧ್ಯಕ್ಷ ಇಸಾಕ್‌ಭಾಷಾ ಹರಪನಹಳ್ಳಿ ಮಾತನಾಡಿ, ರಿಕ್ಕಿ ರೈ ಅವರ ಮೇಲೆ ಗುಂಡಿನ ದಾಳಿ ನಡೆದಿದ್ದು ಖಂಡನೀಯ. ಸರ್ಕಾರ ಅವರಿಗೆ ಸೂಕ್ತ ಭದ್ರತೆ ಒದಗಿಸುವುದರ ಜೊತೆಗೆ ದಾಳಿ ಮಾಡಿದವರನ್ನು ಪತ್ತೆ ಹಚ್ಚಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಬಸವರಾಜ ಮೇಲ್ಮುರಿ, ಇರ್ಫಾನ್ ಹರಪನಹಳ್ಳಿ, ಬಸವರಾಜ ಮೂಕಿ, ಪರಶುರಾಮ ಕಿಳ್ಳೆಕ್ಯಾತರ, ಮಹಮ್ಮದ್‌ಯುಸೂಫ್ ಕೊರಗೇರಿ, ಮಾಳಪ್ಪ ಹರಿಜನ, ಸೋಮಣ್ಣ ಮೇಲ್ಮುರಿ ಮತ್ತಿತರರು ಇದ್ದರು. ಗ್ರೇಡ್–2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು.

# ಗಾಂಧಿ ಭಾರತ; ವಿವಿಧ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೋಮವಾರ ಕಾಲೇಜು ಶಿಕ್ಷಣ ಇಲಾಖೆಯ ಆದೇಶದ ಮೇರೆಗೆ ಮಹಾತ್ಮ ಗಾಂಧೀಜಿ ಅಧ್ಯಕ್ಷತೆ ವಹಿಸಿದ್ದ 1924ರ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸಂದರ್ಭದಲ್ಲಿ "ಗಾಂಧಿ ಭಾರತ" ಎಂಬ ಕಾರ್ಯಕ್ರಮದ ಅಡಿಯಲ್ಲಿ ವಿದ್ಯಾರ್ಥಿಗಳಿಗಾಗಿ "ನಾವು ಮನುಜರು" ಎನ್ನುವ ಧ್ಯೇಯದೊಂದಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು.




ಗಾಂಧೀಜಿ ಚಿಂತನೆಗಳ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಪ್ರಸಕ್ತ ಕಾರ್ಯಕ್ರಮವನ್ನು ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2ರ ಸಹಯೋಗದೊಂದಿಗೆ ಆಯೋಜಿಸಲಾಗಿತ್ತು. ರಾಷ್ಟಗೀತೆಯನ್ನು ಹಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆಯನ್ನು ಕೊಡಲಾಯಿತು.

ರಾಷ್ಟ್ರೀಯ ಸೇವಾ ಯೋಜನೆ ವಿಶ್ವವಿದ್ಯಾಲಯ ಘಟಕದ ಕಾರ್ಯಕ್ರಮ ಅಧಿಕಾರಿಗಳಾದ ಗಾಯತ್ರಿ ಭಾವಿಕಟ್ಟಿ ಅವರು ಪ್ರಾಸ್ತಾವಿಕವಾಗಿ ಕಾರ್ಯಕ್ರಮದ ಧ್ಯೇಯ ಹಾಗೂ ಉದ್ದೇಶವನ್ನು ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ.ಡಿ.ಎಚ್ ನಾಯ್ಕ ಅವರು ಮಹಾತ್ಮ ಗಾಂಧೀಜಿಯ ಚಿಂತನೆಗಳಾದ ಹೋರಾಟದ ಮಾರ್ಗವಾಗಿ ಸತ್ಯ ಮತ್ತು ಅಹಿಂಸೆಯ ಮಹತ್ವ, ಗ್ರಾಮ ಸ್ವರಾಜ್ ಪರಿಕಲ್ಪನೆಯ ಪ್ರಸ್ತುತೆ ಇತ್ಯಾದಿಗಳನ್ನು ಕುರಿತು ಮಾತನಾಡಿದರು.

ಗಾಂಧೀಜಿ ಬೋಧಿಸಿದ ದೇಶದ ಅಭಿವೃದ್ಧಿ ಮತ್ತು ಒಗ್ಗಟ್ಟಿಗೆ ಮಾರಕವಾದ ಏಳು ಸಾಮಾಜಿಕ ಪಾತಕಗಳಾದ ತತ್ವ ರಹಿತ ರಾಜಕಾರಣ, ದುಡಿಮೆ ಇಲ್ಲದ ಸಂಪತ್ತು, ಆತ್ಮಸಾಕ್ಷಿ ಇಲ್ಲದ ಸಂತೋಷ , ಚಾರಿತ್ರ್ಯವಿಲ್ಲದ ಶಿಕ್ಷಣ , ನೀತಿ ಇಲ್ಲದ ವ್ಯಾಪಾರ, ಮಾನವೀಯತೆ ಇಲ್ಲದ ವಿಜ್ಞಾನ ಹಾಗೂ ತ್ಯಾಗವಿಲ್ಲದ ಪೂಜೆ ಇವುಗಳನ್ನು ಬೋಧಿಸಿದರು.

ರಾಷ್ಟ್ರೀಯ ಸೇವಾ ಯೋಜನೆ ಸ್ವ ಆರ್ಥಿಕ ಘಟಕದ ಕಾರ್ಯಕ್ರಮ ಅಧಿಕಾರಿಗಳಾದ ಡಾ.ಉಮೇಶ್ ಅಂಗಡಿ ಕಾರ್ಯಕ್ರಮವನ್ನು ನೆರವೇರಿಸಿ ಕೊಟ್ಟರು. ನಂತರ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆ, ದೇಶಭಕ್ತಿ ಗೀತೆಗಳ ಸ್ಪರ್ಧೆ ಹಾಗೂ ಏಕಪಾತ್ರ ಅಭಿನಯ ಸ್ಪರ್ಧೆಗಳನ್ನು ನಡೆಸಲಾಯಿತು. ಕಾಲೇಜಿನ ಬಿ.ಎ, ಬಿ.ಕಾಂ, ಬಿ.ಎಸ್ಸಿ , ಬಿ.ಬಿ.ಎ ಹಾಗೂ ಬಿ.ಸಿ.ಎ ಕೋರ್ಸ್ ಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಶ್ರೀಮತಿ ಸಂತೋಷ್ ಕುಮಾರಿ, ಡಾ. ಗಿರಿಜಾ ತುರುಮುರಿ ಡಾ. ತುಕಾರಾಂ ನಾಯ್ಕ, ಡಾ. ಶಿವಬಸಪ್ಪ ಮಸ್ಕಿ, ಜ್ಞಾನೇಶ್ವರ ಪತ್ತಾರ್, ಗೋಣಿಬಸಪ್ಪ, ಮ್ಯಾದಾರಹಳ್ಳಿ ಸೋಮೇಶ್ ಮತ್ತು ಗುರುಬಸವರಾಜ್ ಸ್ಪರ್ಧೆಗಳ ತೀರ್ಪುಗಾರರಾಗಿದ್ದರು. ಹಾಗೂ ಡಾ.ಪ್ರಕಾಶ್ ಬಳ್ಳಾರಿ ಡಾ.ಮಹಾಂತೇಶ್ ನೆಲಾಗಣಿ, ಶಿವಣ್ಣ, ಡಾ.ವಿಪ್ಲವಿ, ಮಲ್ಲೇಶಪ್ಪ, ವಸಂತಕುಮಾರ್, ನವೀನ್ ಕುಮಾರ್ ಮೊದಲಾದ ಬೋಧಕ ವರ್ಗದವರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರನ್ನು 6ನೇ ತರಗತಿಗೆ ದಾಖಲಿಸುವ ಕುರಿತು ಅರ್ಹ ಬಾಲಕ/ಬಾಲಕಿಯರಿಂದ ಅರ್ಜಿಗಳನ್ನು ಕರೆಯಲಾಗಿದೆ.

ಈ ಕೆಳಕಂಡ ಅರ್ಹತೆಯುಳ್ಳ ಪರಿಶಿಷ್ಟ ಪಂಗಡದ ಬಾಲಕ / ಬಾಲಕಿಯರು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅಭ್ಯರ್ಥಿಯು ಪರಿಶಿಷ್ಟ ಪಂಗಡದವರಾಗಿರಬೇಕು. ಅರ್ಜಿಯ ಜೊತೆಗೆ ಹೆಚ್ಚುವರಿಯಾಗಿ 2 ಭಾವಚಿತ್ರ ಲಗತ್ತಿಸುವುದು. ಪ್ರಸ್ತುತ ವರ್ಷ 6ನೇ ತರಗತಿಗೆ ಪ್ರವೇಶ ಪಡೆಯಲು 5ನೇ ತರಗತಿಯಲ್ಲಿ ಶೇ.60ಕ್ಕಿಂತ ಹೆಚ್ಚಿನ ಅಂಕ ಗಳಿಸಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮಿತಿಯೊಳಗೆ ಇರಬೇಕು. ವಿದ್ಯಾರ್ಥಿಗಳ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಅಂಕಪಟ್ಟಿಗಳ ದೃಢೀಕೃತ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು. ಲಿಖಿತ ಪ್ರವೇಶ ಪರೀಕ್ಷೆ ನಡೆಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಪ್ರಾರಂಭ ದಿ: 19-04-2025 ರಿಂದ 03-05-2025 ರ ವರೆಗೆ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಹಾಗೂ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಒಂದೇ ಕುಟುಂಬದಲ್ಲಿನ ಇಬ್ಬರು ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಕಲ್ಪಿಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆನ್‌ಲೈನ್ ತರಬೇತಿ ಪೋರ್ಟಲ್, ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಗೆ ಚಾಲನೆ

# ಸಾಮರ್ಥ್ಯಾಭಿವೃದ್ಧಿ ತರಬೇತಿಯ ಮಹತ್ವದ ಹೆಜ್ಜೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಸರ್ಕಾರದ ತರಬೇತಿ ನೀತಿ-1997ರಂತೆ, ಆಡಳಿತ ತರಬೇತಿ ಸಂಸ್ಥೆ ಮೈಸೂರು, ಜಿಲ್ಲಾ ತರಬೇತಿ ಕೇಂದ್ರಗಳು ಮತ್ತು ಸಚಿವಾಲಯ ತರಬೇತಿ ಸಂಸ್ಥೆಯ ಮೂಲಕ ಸಿಬ್ಬಂದಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವ ಮಹತ್ವದ ಹೆಜ್ಜೆ ಕೈಗೊಳ್ಳಲಾಗಿದೆ.



ಇನ್ನು ಮುಂದೆ ತರಬೇತಿ ಕೇವಲ ಭೌತಿಕವಷ್ಟೇ ಅಲ್ಲದೆ, ಖ-ಉಽಖಿ ವೇದಿಕೆಯ ಸಹಭಾಗಿತ್ವದಲ್ಲಿ ൃಣಣಥಿ://ಚಿಣುಟಥಿಂಡಿಜ.ಇಚಿಡಿ-ಟಿಚಿಣಚಿಇಚಿ.ರಠಡಿ.ಟಿ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿಯೂ ಇದನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲಾಗಿದೆ. ಪ್ರಸ್ತುತ 4,55,746 ಸರ್ಕಾರಿ ನೌಕರರು ಈ ವೇದಿಕೆಯಲ್ಲಿ ನೋಂದಣಿ ಮಾಡಿದ್ದಾರೆ. ಸರ್ಕಾರಿ ನೌಕರರು ಅವರ ಎಚ್‌ಆರ್‌ಎಮ್‌ಎಸ್ (ಊಖಒಖ) ಮೊಬೈಲ್ ಸಂಖ್ಯೆಯ ಮೂಲಕ ಖ-ಉಽಖಿ ವೇದಿಕೆಯಲ್ಲಿ ಲಾಗಿನ್ ಆಗಿ ತರಬೇತಿ ಪಡೆಯಬಹುದಾಗಿದೆ.

ಕೆಲಸದ ಹೊರೆ ಅಥವಾ ಸಿಬ್ಬಂದಿ ಕೊರತೆಯಿಂದಾಗಿ ವೈಯಕ್ತಿಕವಾಗಿ ತರಬೇತಿಗಳಿಗೆ ಹಾಜರಾಗಲು ಸಾಧ್ಯವಾಗದ ಸರ್ಕಾರಿ ನೌಕರರು ಈ ಸೌಲಭ್ಯವನ್ನು ಪಡೆಯಬಹುದು. ಸುಮಾರು ಹತ್ತು ತರಬೇತಿ ಮಾಡ್ಯೂಲ್‌ಗಳನ್ನು ಈಗಾಗಲೇ ಅಪ್‌ಲೋಡ್ ಮಾಡಲಾಗಿದೆ ಮತ್ತು ಇನ್ನೂ ಹಲವು ಮಾಡ್ಯೂಲ್‌ಗಳು ತಯಾರಿಕಾ ಪ್ರಕ್ರಿಯೆಯಲ್ಲಿವೆ. ಇದು ಕೇವಲ ಸಾಮರ್ಥ್ಯವರ್ಧನೆಯಷ್ಟೇ ಅಲ್ಲದೆ, ಸರ್ಕಾರದ ಕಾರ್ಯವೈಖರಿ ಹಾಗೂ ಜನತೆಗೆ ಒದಗಿಸಬಹುದಾದ ಸೇವೆಗಳ ಗುಣಮಟ್ಟವನ್ನು ಉತ್ತುಂಗಕ್ಕೆ ಎತ್ತುವ ದಿಕ್ಕಿನಲ್ಲಿ ಕ್ರಾಂತಿಕಾರಿ ಹೆಜ್ಜೆಯಾಗಿದೆ. ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿವರ್ಗದವರು ಈ ಪೋರ್ಟಲ್‌ನಲ್ಲಿ ನೋಂದಾಯಿಸಿ, ತಮಗೆ ಅಗತ್ಯವಾದ ತರಬೇತಿಗಳನ್ನು ಪಡೆಯುವುದರ ಮೂಲಕ ಸಮರ್ಥ ಹಾಗೂ ಜನಮೈತ್ರಿ ಆಡಳಿತಕ್ಕೆ ಪೂರಕವಾಗಿ ತಮ್ಮ ಪಾತ್ರವನ್ನು ನಿಭಾಯಿಸಬಹುದಾಗಿದೆ.

ಈ ಮಹತ್ವಾಕಾಂಕ್ಷಿ ಯೋಜನೆಯಡಿ ಸರ್ಕಾರದ ವಿವಿಧ ಇಲಾಖೆಗಳ 6 ಲಕ್ಷ ನೌಕರರು ಸೇರಿದಂತೆ ಅವರ ಕುಟುಂಬದ ಸದಸ್ಯರನ್ನು ಒಳಗೊಂಡಂತೆ ಅಂದಾಜು 25 ಲಕ್ಷ ಫಲಾನುಭವಿಗಳು ನಗದು ರಹಿತ ಆರೋಗ್ಯ ಸೌಲಭ್ಯವನ್ನು ಪಡೆಯಲಿದ್ದಾರೆ. ಈ ಯೋಜನೆಯಡಿ ಮೊದಲನೇ ಹಂತದಲ್ಲಿ ಸರ್ಕಾರಿ ನೌಕರರು ಅಂದಾಜು 2000 ಒಳರೋಗಿ ಚಿಕಿತ್ಸಾ ವಿಧಾನಗಳಿಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ನಗದುರಹಿತ ಚಿಕಿತ್ಸೆಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಬೆಂಗಳೂರಿನಲ್ಲಿ ಜರುಗಿದ ಕರ್ನಾಟಕ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಬಹುದಿನದ ಬೇಡಿಕೆಯಂತೆ ಎಲ್ಲಾ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ಆರೋಗ್ಯ ಸೇವೆಗಳನ್ನು ಒದಗಿಸಲು ರಾಜ್ಯ ಸರ್ಕಾರವು ರೂಪಿಸಿರುವ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (ಏಂಖಖ)ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿದ್ಯುಕ್ತವಾಗಿ ಚಾಲನೆ ನೀಡಿದರು. ಅದೇ ಸಂದರ್ಭದಲ್ಲಿ ಯೋಜನೆಗೆ ಊಖಒಖ ವ್ಯವಸ್ಥೆಯಡಿ ಸರ್ಕಾರಿ ನೌಕರರ ನೋಂದಣಿನ್ನು ಕೈಗೊಳ್ಳಲಾಯಿತು.

### ಬಿತ್ತನೆ ಕೈಗೊಳ್ಳುವ ಮುನ್ನ ಕೈಗೊಳ್ಳಬೇಕಾದ ಕ್ರಮಗಳು

# ರೈತ ಬಾಂಧವರಿಗೆ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ 2025-26ನೇ ಸಾಲಿನ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಶುರುವಾಗಿದ್ದು, ಮುಂಗಾರು ಮಳೆಯೂ ಉತ್ತಮವಾಗುವ ನಿರೀಕ್ಷೆಯಿದೆ. ರೈತ ಬಾಂಧವರು ಮಾಗಿ ಉಳುಮೆ ಕೈಗೊಳ್ಳಲು ಇದು ಸೂಕ್ತ ಸಮಯವಾಗಿದೆ. ಇಳಿಜಾರಿಗೆ ಅಡ್ಡಲಾಗಿ ಬದು ನಿರ್ಮಾಣ ಮಾಡಿಕೊಂಡಲ್ಲಿ, ಬಿದ್ದ ಮಳೆಯ ನೀರನ್ನು ಹಿಡಿದಿಟ್ಟುಕೊಳ್ಳಬಹುದು. ರೈತರು ಬಿತ್ತನೆಗೆ ಅವಸರ ಮಾಡದೇ, ಮಣ್ಣಿನಲ್ಲಿ ಸಂಪೂರ್ಣ ತೇವಾಂಶವಾದ ನಂತರ ಬಿತ್ತನೆ ಕೈಗೊಳ್ಳಲು ತಿಳಿಸಿದೆ. ಇಲ್ಲದೇ ಹೋದರೆ ಬಿತ್ತಿದ ಬೆಳೆಯು ಸರಿಯಾಗಿ ಮೊಳಕೆ ಬರಲು ಸಾಧ್ಯವಾಗದೇ ಇರಬಹುದು, ಅಥವಾ ಬೆಳವಣಿಗೆ ವೇಳೆಗೆ ತೇವಾಂಶ ಕೊರತೆ ಉಂಟಾಗಬಹುದಾಗಿದೆ.



ಜಿಲ್ಲೆಯಲ್ಲಿ ಬಹುಶಃ ಎಲ್ಲ ತಾಲೂಕುಗಳಲ್ಲಿ ಬೇಸಿಗೆ ಬೆಳೆಗಳು ಕಟಾವಿಗೆ ಬಂದಿದ್ದು, ಕಟಾವಿನ ನಂತರ ಭೂಮಿ ಸಿದ್ಧಪಡಿಸಲು ಉತ್ತಮ ಸಮಯವಾಗಿದೆ. ರೈತರು ತಮ್ಮ ಭೂಮಿಯ ಮಣ್ಣು ಪರೀಕ್ಷೆ ಕೈಗೊಂಡು, ವಿಶ್ಲೇಷಣಾ ವರದಿಯ ಆಧಾರದ ಮೇಲೆ ಬೆಳೆಗಳಿಗೆ ರಸಗೊಬ್ಬರ ಮತ್ತು ಕಾಂಪೋಸ್ಟ್ ಗೊಬ್ಬರಗಳನ್ನು ನೀಡಿ ಸಮಗ್ರ ಪೋಷಕಾಂಶ ಪದ್ಧತಿ ಅನುಸರಿಸಿದಲ್ಲಿ ಭೂಮಿಯ ಫಲವತ್ತತೆ ಮತ್ತು ಉತ್ಪಾದಕತೆಯನ್ನು ಕಾಪಾಡಬಹುದಾಗಿದೆ.

ಜಿಲ್ಲೆಯಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮಿಗೆ ಮೆಕ್ಕೆ ಜೋಳ 1,15,700 ಹೆ., 1,32,500 ಹೆ. ಹೆಸರು, 21,000 ಹೆ. ಶೇಂಗಾ, 7,500 ಹೆ. ಸೂರ್ಯಕಾಂತಿ ಹಾಗೂ 17,000 ಹೆ. ಹತ್ತಿ ಸೇರಿದಂತೆ ಒಟ್ಟು 3,06,185 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯ ಗುರಿಯಿದೆ. ಜಿಲ್ಲೆಯ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆಯಾಗದಂತೆ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನೀಕರಿಸಲು ಕ್ರಮ ಕೈಗೊಳ್ಳಲಾಗಿದೆ.

ಕಳೆದ ಸಾಲಿನಂತೆ ಪ್ರಸಕ್ತ ವರ್ಷವೂ ಕೂಡ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ, ಇಲಾಖೆಯ ಮಾರ್ಗಸೂಚಿಯನ್ವಯ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತದೆ. ಕರ್ನಾಟಕ ರಾಜ್ಯ ಬೀಜ ನಿಗಮ, ರಾಷ್ಟ್ರೀಯ ಬೀಜ ನಿಗಮ ಮತ್ತು ಖಾಸಗಿ ಮಾರಾಟ ಮಳಿಗೆಗಳಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜದ ದಾಸ್ತಾನು ಮಾಡಿಕೊಳ್ಳಲಾಗಿದೆ. ಇಲಾಖೆಯ ಮೂಲಕ ಬೀಜ ಬದಲಾವಣೆ ಅನುಪಾತಕ್ಕನುಗುಣವಾಗಿ (ಮೆಕ್ಕೆಜೋಳ ಹೊರತಾಗಿ ಉಳಿದೆಲ್ಲ ಬೀಜಗಳು ಶೇ.33 ಮಾತ್ರ) ಬೀಜಗಳನ್ನು ಪೂರೈಸಲಾಗುತ್ತದೆ. ಕಾರಣ, ರೈತರು ಹಿಂದಿನ ಹಂಗಾಮುಗಳಲ್ಲಿ ತಮ್ಮಲ್ಲಿ ಕಾಯ್ದಿರಿಸಿಕೊಂಡ ಬೀಜಗಳನ್ನು ಉಪಯೋಗಿಸಲು ಕೋರಿದೆ.

ರೈತ ಬಂಧುಗಳು ಬಿತ್ತನೆ ಕೈಗೊಳ್ಳುವ ಮುನ್ನ ಕಡ್ಡಾಯವಾಗಿ ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಲು ವಿನಂತಿಸಿದೆ. ಹೆಸರು ಬೀಜಗಳನ್ನು ಪ್ರತಿ ಕೆ.ಜಿ ಬೀಜಕ್ಕೆ 35-40 ಗ್ರಾಂ. ರೈಜೋಬಿಯಂನಿಂದ ಬೀಜೋಪಚಾರ ಮಾಡಿ ಬಿತ್ತಬೇಕು. ಇದರಿಂದ ಬೆಳೆಯ ಪ್ರಾಥಮಿಕ ಹಂತದಲ್ಲಿ ಸಾರಜನಕವು ಚೆನ್ನಾಗಿ ಲಭ್ಯವಾಗಿ, ಬೆಳೆಯ ಉತ್ತಮ ಬೆಳವಣಿಗೆಗೆ ಸಹಾಯವಾಗುತ್ತದೆ. ಪ್ರತಿ ಕಿ.ಗ್ರಾಂ. ಬೀಜಕ್ಕೆ 10 ಗ್ರಾಂ. ಟ್ರೈಕೋಡರ್ಮಾದಿಂದ ಬೀಜೋಪಚಾರ ಮಾಡಿದಲ್ಲಿ ಸರ್ಕೊಸ್ಪೊರಾ ಎಲೆಚುಕ್ಕೆ ರೋಗದ ನಿರ್ವಹಣೆ ಮಾಡಬಹುದು.

ಗೋವಿನ ಜೋಳದಲ್ಲಿ ಪ್ರತಿ ಕಿ.ಗ್ರಾಂ ಬೀಜಕ್ಕೆ 25 ಗ್ರಾಂ ರಂಜಕ ಕರಗಿಸುವ ಅಣುಜೀವಿ (ಸುಡೋಮೊನಾಸ ಸ್ಟ್ರಯೇಟಾ ಎಚ್-21) ಹಾಗೂ 6 ಗ್ರಾಂ ಟ್ರೈಕೋಡರ್ಮಾ ಜೈವಿಕ ಶಿಲೀಂದ್ರನಾಶಕದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡುವುದರಿಂದ ಕಾಂಡ ಕಪ್ಪು ಕೊಳೆ ರೋಗವನ್ನು ನಿಯಂತ್ರಿಸಬಹುದಾಗಿದೆ. ಅಣುಜೀವಿ ಗೊಬ್ಬರಗಳಾದ ಅಝೋಸ್ಪಿರಿಲಂ 250 ಗ್ರಾಂ ಪುಡಿ ಅಥವಾ 50 ಮಿ.ಲೀ ದ್ರವರೂಪದ ಪದಾರ್ಥ ರಂಜಕ ಕರಗಿಸುವ ಜೈವಿಕ ಗೊಬ್ಬರ 250 ಗ್ರಾಂ ಪುಡಿ ಅಥವಾ 25 ಮಿ.ಲೀ. ದ್ರವರೂಪದ ಪದಾರ್ಥ ಉಪಯೋಗಿಸಬಹುದಾಗಿದೆ. ಶೇಂಗಾ ಬೀಜಕ್ಕೆ ರೈಜೋಬಿಯಂ ಅಣುಜೀವಿ ಗೊಬ್ಬರ 1.0 ಕಿ.ಗ್ರಾಂ ಪುಡಿ ಅಥವಾ 250 ಮಿ.ಲೀ ದ್ರವರೂಪದ ಪದಾರ್ಥ ರಂಜಕ ಕರಗಿಸುವ ಜೈವಿಕ 1 ಕಿ.ಗ್ರಾಂ. ಪುಡಿ ಅಥವಾ 120 ಮಿ.ಲೀ. ದ್ರವರೂಪದ ಪದಾರ್ಥ, 2.5 ಕಿ.ಗ್ರಾಂ ರೈಜೋಬಿಯಂ, ರಂಜಕ ಕರಗಿಸುವ ಅಣುಜೀವಿ ಜೀವಾಣುವನ್ನು ಬೀಜಕ್ಕೆ ಉಪಚರಿಸಬೇಕು. ಅಧಿಕೃತ ಪರವಾನಗಿ ಹೊಂದಿದ ಮಳಿಗೆಗಳಲ್ಲಿ ಮಾತ್ರ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು. ಕೃಷಿ ಪರಿಕರಗಳನ್ನು ಎಂ.ಆರ್.ಪಿಗಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದಲ್ಲಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳು ಮತ್ತು ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಗಮನಕ್ಕೆ ತರಲು ಕೋರಿದೆ. ಅಂತಹವರ ಮೇಲೆ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ವೇತಾ ಬಾಗೇವಾಡಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ನಾವು ಶೈಕ್ಷಣಿಕವಾಗಿ ಪ್ರಗತಿಯಾದರೆ ಜೀವನದಲ್ಲಿ ಒಳ್ಳೆಯ ಬದುಕನ್ನು ಸಾಗಿಸಿ ಸಮಾಜದಲ್ಲಿ ಸಮಾನತೆಯನ್ನು ಕಾಣಲು ಸಾಧ್ಯವಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಗದಗ ಜಿಲ್ಲಾ ಕಾರ್ಯಾಧ್ಯಕ್ಷ ಸಿದ್ದಪ್ಪ ಎನ್.ಲಿಂಗದಾಳ ಹೇಳಿದರು.

ಬೆಟಗೇರಿ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿನಿ, ಗುರಮ್ಮಾ ಕಾಲೇಜ್ ಆಫ್ ನರ್ಸಿಂಗ್ ಗದಗ ಶಿಕ್ಷಣ ವಿದ್ಯಾಲಯದ 2023-24ನೇ ಸಾಲಿನ ಅಂತಿಮ ಬಿಎಸ್ಸಿ ನರ್ಸಿಂಗ್ ರ್‍ಯಾಂಕ್ ಪಡೆದ ಶ್ವೇತಾ ಬಾಗೇವಾಡಿಯವರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶ್ವೇತಾ ಬಾಗೇವಾಡಿ, ನಾನು ಶೈಕ್ಷಣಿಕ ಕ್ಷೇತ್ರದಲ್ಲಿ ಗುರಿ ಸಾಧಿಸಲು ನನಗೆ ಸಿದ್ದಪ್ಪ ಲಿಂಗದಾಳ ಮತ್ತು ಶ್ವೇತಾ ಪಾಟೀಲರು ಬೆಂಬಲವಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮುಂಡರಗಿ ಘಟಕದ ರಾಜ್ಯ ಪರಿಷತ್ ಸದಸ್ಯ ಮಲ್ಲಿಕಾರ್ಜುನ ಕಲಕಂಬಿ, ವಸತಿ ನಿಲಯದ ಮೇಲ್ವಿಚಾರಕಿ ಸುಜಾತಾ ಪಾಟೀಲ, ಗೌತಮ ಬುದ್ಧ ಸೇವಾ ಸಮಿತಿಯ ಹೆಚ್.ಎನ್. ಚಿಗರ, ಗೀತಾ ಕುಂಕದ, ಸಂತೋಷ ಕುಮಾರ ಕಾಲ್ಯಾಣ್ ಮುಂತಾದವರು ಉಪಸ್ಥಿತರಿದ್ದರು.

# ಮಕ್ಕಳಿಗೆ ಪಠ್ಯೇತರ ಚಟುವಟಿಕೆ ಅವಶ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿ ಜೀವನದಲ್ಲಿ ಮಕ್ಕಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸುವುದು ಅವಶ್ಯಕವಾಗಿದೆ ಎಂದು ಜ್ಯೋತಿ ನೀಲಗುಂದ ಹೇಳಿದರು.

ಅವರು ಪಟ್ಟಣದ ಕನಕದಾಸ ಶಿಕ್ಷಣ ಸಂಸ್ಥೆಯಲ್ಲಿ ಗದಗ ಐಕಾನ್ ಸಂಸ್ಥೆ ವತಿಯಿಂದ ಬೇಸಿಗೆ ಶಿಬಿರದಲ್ಲಿ ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು, ಗದಗ ಜಿಲ್ಲಾ ಬಾಲಭವನ ಇವುಗಳ ಸಂಯುಕ್ತ ಆಶ್ರಯದಲ್ಲಿ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ ವಿಜೇತ ಮಕ್ಕಳಿಗೆ ಪ್ರಶಸ್ತಿ ನೀಡಿ ಮಾತನಾಡಿದರು.

ಮಕ್ಕಳಲ್ಲಿ ಸದೃಢ ದೇಹದಂತೆಯೇ ಸದೃಢ ಮನಸ್ಸು ಕೂಡ ಅಷ್ಟೇ ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ ಪಠ್ಯೇತರ ಚಟುವಟಿಕೆಗಳಾದ ಚಿತ್ರಕಲೆ, ಸಂಗೀತ, ಸಾಹಿತ್ಯ, ನಾಟಕ ಇತ್ಯಾದಿಗಳಲ್ಲಿ ಪಾಲ್ಗೊಳ್ಳುವ ಅಗತ್ಯವಿದೆ. ಭವಿಷ್ಯದ ಉತ್ತಮ ಪ್ರಜೆಗಳಾಗಲು ಉತ್ತಮ ಸಂಸ್ಕಾರ, ಉತ್ತಮ ನಡುವಳಿಕೆ, ಗುಣಮಟ್ಟದ ಶಿಕ್ಷಣ ಪಡೆಯಲು ನಿತ್ಯ ಕ್ರಿಯಾಶೀಲರಾಗಿರಬೇಕು ಎಂದರು. ಚಿತ್ರಕಲಾ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳಾದ ಬದ್ರುನಿಸಾ ಯಳವತ್ತಿ, ಪರಶುರಾಮ ಟೋಪಣ್ಣವರ, ಮುಸ್ಕಾನ ಕುರ್ತಕೋಟಿ, ಧೃವ ಬಟ್ಟೂರ, ಶ್ರೇಯಸ್ ಬ್ಯಾಳಿ, ಸಮೃದ್ಧಿ ಬ್ಯಾಳಿ ವಿಜೇತರಾದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಐಕಾನ್ ಸಂಸ್ಥೆಯ ನಾಗರಾಜ ಬಂಡಿ ವಹಿಸಿದ್ದರು. ಗದಗ ಜಿಲ್ಲಾ ಬಾಲಭವನ ಸಂಯೋಜಕ ರವಿ ಉಮಚಗಿ, ಉಮಾ ಬ್ಯಾಳಿ, ಶಿವಲಿಂಗಪ್ಪ ಕೊಂಡಿಕೊಪ್ಪ, ಪೂಜಾ ಮ್ಯಾಗೇರಿ, ರೇಷ್ಮಾ ಪರ್ವತಗೌಡರ, ದಾವಲಸಾಬ ಲಾಡಸಾಬನವರ, ಶಿವಲೀಲಾ ಕೋರಿ, ರುಬೀಯಾ ನಮಾಜಿ, ಲಕ್ಷ್ಮೀ ಕೆಲಗಾರ, ನಿಶಾತ್ ಲಾಡಸಾಬನವರ, ಆಶೀಫ್ ನದಾಫ್ ಇದ್ದರು.

# ಗದಗ ಸೇರಿ ಕರ್ನಾಟಕದಲ್ಲಿ ಒಂದು ವಾರ ಭಾರೀ ಮಳೆ ಸಾಧ್ಯತೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಒಂದು ವಾರ ಭಾರೀ ಮಳೆ ಆಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ಕೊಟ್ಟಿದೆ.

ವಾಯುಭಾರ ಕುಸಿತದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಏಳು ದಿನಗಳ ಕಾಲ ಮಳೆಯಾಗಲಿದೆ. ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಬಿರುಗಾಳಿ, ಸಿಡಿಲು-ಗುಡುಗು ಸಹಿತ ಭಾರೀ ಮಳೆ ಬರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಹೇಳಿದೆ. ಈಗಾಗಲೇ ರಾಜ್ಯದ ಹಲವೆಡೆ ಮಳೆರಾಯ ಅಬ್ಬರಿಸುತ್ತಿದ್ದು, ಈ ಆರ್ಭಟ ಮುಂದಿನ ಒಂದು ವಾರವೂ ಮುಂದುವರೆಯಲಿದೆ ಎಂದು ಅಂದಾಜಿಸಲಾಗಿದೆ.

ಏ.27ರವರೆಗೆ ಮಳೆ ಬರುವ ಮುನ್ಸೂಚನೆ ನೀಡಲಾಗಿದೆ. ಅದರಂತೆ ದಕ್ಷಿಣ ಕನ್ನಡ, ಉಡುಪಿ, ಬೆಳಗಾವಿ, ಹಾವೇರಿ, ಗದಗ, ಧಾರವಾಡ, ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗದ ಒಂದೆರಡು ಸ್ಥಳಗಳಲ್ಲಿ ಬಲವಾದ ಮೇಲ್ಮೈ ಸುಳಿಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಏ.24 ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಗದಗ, ಕೊಪ್ಪಳ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಬಲವಾದ ಮೇಲ್ಮೈ ಗಾಳಿ ಬೀಸುವ ಸಾಧ್ಯತೆಯಿದೆ. ಏ.25 ರಂದು ಉಡುಪಿ, ದಕ್ಷಿಣ ಕನ್ನಡದ ಎರಡು ಸ್ಥಳಗಳಲ್ಲಿ, ಉತ್ತರ ಕರ್ನಾಟಕದ ಒಳನಾಡಿನ ಎರಡು ಸ್ಥಳಗಳಲ್ಲಿ, ದಕ್ಷಿಣ ಕನ್ನಡದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಏ.26ರಂದು ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳ ಎರಡು ಸ್ಥಳಗಳಲ್ಲಿ, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಗದಗದಲ್ಲಿ ಮಳೆಯಾಗುವ ಸಾಧ್ಯತೆ ಇದೆ.

# 'ವಿಶ್ವಕರ್ಮ ಸಾಹಿತ್ಯ ಸಂಪದ' ಗ್ರಂಥ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿಜಯನಗರ ಬಡಾವಣೆಯಲ್ಲಿರುವ ಶ್ರೀವಿಶ್ವಕರ್ಮ ಭವನದ 'ಕಲಾ ತಪಸ್ವಿ ದಿ. ಟಿ.ಪಿ. ಅಕ್ಕಿ' ವೇದಿಕೆಯಲ್ಲಿ, ನಿವೃತ್ತ ಪ್ರಾಚಾರ್ಯ ರಾಜಗೋಪಾಲ ಡಿ ಕಡ್ಲಿಕೊಪ್ಪ ಅಭಿಮಾನಿ ಬಳಗ ಹಮ್ಮಿಕೊಂಡಿದ್ದ 65ನೇ ಜನ್ಮದಿನ, ವಿವಾಹ ವಾರ್ಷಿಕೋತ್ಸವ ಹಾಗೂ ಅಭಿನಂದನಾ ಸಮಾರಂಭದಲ್ಲಿ 'ಕಲೋದ್ಯಮಿ' ಅಭಿನಂದನಾ ಗ್ರಂಥ ಹಾಗೂ 'ವಿಶ್ವಕರ್ಮ ಸಾಹಿತ್ಯ ಸಂಪದ' ಗ್ರಂಥಗಳನ್ನು ವಿಧಾನಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಬಿಡುಗಡೆಗೊಳಿಸಿದರು.

ಜ.ತೋಂಟದ ಸಿದ್ಧರಾಮ ಸ್ವಾಮೀಜಿ, ಬಾಗಲಕೋಟೆಯ ಮಳೆ ರಾಜೇಂದ್ರ ಮುರನಾಳ ಕ್ಷೇತ್ರ ಮಠದ ಶ್ರೀ ಮಳೆರಾಜೇಂದ್ರಸ್ವಾಮಿ ಮಹಾಪುರುಷ ಸ್ವಾಮೀಜಿ, ಯಾದಗಿರಿಯ ಶಹಪುರದ ಶ್ರೀವಿಶ್ವಕರ್ಮ ಏಕದಂಡಗಿಮಠದ ಶ್ರೀಕಾಳಹಸ್ತೇಂದ್ರ ಮಹಾಸ್ವಾಮೀಜಿ, ರಾಜಗೋಪಾಲ ಡಿ.ಕಡ್ಲಿಕೊಪ್ಪ, ಲಕ್ಷ್ಮೀ ಕಡ್ಲಿಕೊಪ್ಪ, ಪ್ರಾ. ಅಶೋಕ ಟ.ಅಕ್ಕಿ, ಪ್ರೊ. ಶಿವಾನಂದ ಪಟ್ಟಣಶೆಟ್ಟಿ, ಡಾ. ಕೆ.ಪಿ. ಈರಣ್ಣ, ಪಿ.ಬಿ. ಬಡಿಗೇರ, ಡಾ. ಜಿ.ಬಿ. ಪಾಟೀಲ, ಪ್ರೊ. ಸಿದ್ದು ಯಾಪಲಪರವಿ, ಡಾ. ಎಸ್.ಡಿ. ಯರಗೇರಿ, ಮೌನೇಶ ಸಿ.ಬಡಿಗೇರ(ನರೇಗಲ್ಲ), ವಿಶ್ವನಾಥ ಕಮ್ಮಾರ, ವಿಜಯ ಕಿರೇಸೂರ ಸೇರಿದಂತೆ ಕಡ್ಲಿಕೊಪ್ಪ ಕುಟುಂಬದ ಸದಸ್ಯರು ವೇದಿಕೆಯಲ್ಲಿದ್ದರು.

# ನಿಧನ

## ರೇಣುಕಾ (ಅಜ್ಜಣ್ಣ) ಪಾಟೀಲ



ಗದಗ: ಜಿ.ಪಂ ಮಾಜಿ ಅಧ್ಯಕ್ಷ ಸಿದ್ದಲಿಂಗೇಶ್ವರ ಪಾಟೀಲ ಅವರ ಮಾತೋಶ್ರೀ, ಪಂಚಾಕ್ಷರಿ ನಗರದ ನಿವಾಸಿಗಳಾದ ರೇಣುಕಾ ಹೊಳಿಯಪ್ಪಗೌಡ (ಅಜ್ಜಣ್ಣ) ಪಾಟೀಲ (59) ಅವರು ಸೋಮವಾರ ಬೆಳಿಗ್ಗೆ ನಿಧನರಾದರು. ಮೃತರ ಅಂತ್ಯಕ್ರಿಯವು ಲಕ್ಕುಂಡಿ ಗ್ರಾಮದಲ್ಲಿ ಅದೇ ದಿನ ಸಂಜೆ ಜರುಗಿತು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ ಸೇರಿದಂತೆ ಹಲವಾರು ಗಣ್ಯರು ಸಂತಾಪ ಸೂಚಿಸಿದ್ದಾರೆ.

### ಹಣಕಾಸಿನ ವಿಚಾರಕ್ಕೆ ಕಿರಿಕ್: ಯುವಕನ ತಲೆ ಒಡೆದು ಬರ್ಬರ ಕೊಲೆ!

■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಜಿಲ್ಲೆಯ ತರೀಕೆರೆ ತಾಲೂಕಿನ ಅಮೃತಾಪುರ ಗ್ರಾಮದಲ್ಲಿ ಚೀಟಿ ಹಣದ ವಿಚಾರವಾಗಿ ಯುವಕನನ್ನ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಜರುಗಿದೆ.

27 ವರ್ಷದ ಸಂಜುನಾಯ್ಕ ಕೊಲೆಯಾದ ದುರ್ದೈವಿ. 30 ವರ್ಷದ ರುದ್ರೇಶ್ ನಾಯ್ಕ ಎಂಬಾತನಿಂದ ಕೊಲೆ ನಡೆದಿದೆ. ಅಮೃತಾಪುರ ಗ್ರಾಮದ ಸೇವಾಲಾಲ್ ಸಂಘದ ಚೀಟಿ ವ್ಯವಹಾರದಲ್ಲಿ ಇಬ್ಬರ ನಡುವೆ ಗಲಾಟೆಯಾಗಿತ್ತು.

# ಸೇವಾ ಭಾವನೆಯಿಂದ ಕಾರ್ಯಸಿದ್ಧಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿಯೊಬ್ಬರೂ ಸೇವಾ ಮನೋಭಾವನೆಯಿಂದ ಕೆಲಸ ಮಾಡಿದಲ್ಲಿ ಕಾರ್ಯಸಿದ್ಧಿಯಾಗುತ್ತದೆ ಎಂದು ಗದಗ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗಾರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಗದಗ ಜಿಲ್ಲಾ ಯೋಜನಾ ನಿರ್ದೇಶಕ ಯೋಗರಾಜ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದರು.



ಧರ್ಮಸ್ಥಳ ಗ್ರಾಮಾಭಿವೃದ್ಧಿಯ ಪ್ರತಿಯೊಬ್ಬ ಸೇವಾ ಪ್ರತಿನಿಧಿಯ ಸೇವೆ ಅತ್ಯಂತ ಶ್ಲಾಘನೀಯ. ಗಾಂಧೀಜಿ ಕಂಡ ಕನಸು ಇಂದು ನನಸಾಗಲು ಧರ್ಮಸ್ಥಳ ಗ್ರಾಮಾಭಿವೃದ್ಧಿಯ ಡಾ. ವೀರೇಂದ್ರ ಹೆಗ್ಗಡೆ ಅವರ ಶ್ರಮ ಅತ್ಯಮೂಲ್ಯವಾಗಿದೆ. ಗ್ರಾಮೀಣ ಭಾಗದ ಬಡ ಕುಟುಂಬಗಳನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಹತ್ತು ಹಲವು ಯೋಜನೆಗಳ ಮೂಲಕ ಆರ್ಥಿಕವಾಗಿ ಸದೃಢರನ್ನಾಗಿಸಲು ಕಂಕಣಬದ್ಧರಾಗಿ ಸೇವಾ ಮನೋಭಾವದಿಂದ ಕಾಯಕ ಮಾಡುತ್ತಿದ್ದಾರೆ. ಗದಗ ಜಿಲ್ಲಾ ಯೋಜನಾಧಿಕಾರಿ ಯೋಗೇಶ ಅವರ ಸೇವಾ ಮನೋಭಾವನೆಯಿಂದ ಮುಳಗುಂದ ಪಟ್ಟಣದಲ್ಲಿ ಸಾಕಷ್ಟು ಅಭಿವೃದ್ಧಿ ಸಾಧ್ಯವಾಗಿದೆ ಎಂದರು.

ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಿದ್ದರು. ಡಾ. ಎಸ್.ಸಿ. ಚವಡಿ, ಎಸ್.ಸಿ. ಬಡ್ನಿ, ಶಿವಬಸವ ಹಸಬಿ, ಮಾಹಾಂತೇಶ ಕೋರಿ, ತಾ.ಯೋಜನಾಧಿಕಾರಿ ಪುನಿತ ಓಲೇಕಾರ, ಮೇಲ್ವಿಚಾರಕಿ ಶಾಂತಾ, ಪ್ರಕಾಶ ಮದ್ದಿನ ಇದ್ದರು.

# ಯೋಗ ಸೇವಾ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆ ಗದಗ ಸಂಸ್ಥೆಯ 50ನೇ ವಾರ್ಷಿಕೋತ್ಸವ (ಸುವರ್ಣ ಮಹೋತ್ಸವ) ಅಂಗವಾಗಿ ಯೋಗ ಕ್ಷೇತ್ರಗಳಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿದ, ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮ ರೂಪಿಸಲಾಗಿದೆ. ಯೋಗಪಾಠಶಾಲೆಯ ಸುವರ್ಣಮಹೋತ್ಸವ ಮುಂಬರುವ 19–5–2025ರಂದು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಶಿವಾನುಭವ ಮಂಟಪ (ಶ್ರೀಮಠದ ಆವರಣ) ಗದಗದಲ್ಲಿ ಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಯಡೆಯೂರು ಶ್ರೀ ಜಗದ್ಗುರು ತೋಂಟ–ದಾರ್ಯ ಸಂಸ್ಥಾನಮಠ ಡಂಬಳ–ಗದಗ ಇವರ ದಿವ್ಯ ಸಾನ್ನಿಧ್ಯದಲ್ಲಿ ಗಣ್ಯಮಾನ್ಯರ ಉಪಸ್ಥಿತಿಯಲ್ಲಿ ಜರುಗಲಿದೆ. ಯೋಗ ಶಿಕ್ಷಣ, ಪ್ರಸಾರ, ಸಾಹಿತ್ಯ, ಸಾಧನೆ, ಕ್ರೀಡೆ, ಪ್ರದರ್ಶನ, ಸಂಘಟನೆ ಸೇರಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿದ, ಸಲ್ಲಿಸುತ್ತಿರುವ ಸೇವಾ ಕರ್ತರನ್ನು ಸನ್ಮಾನಿಸಿ ಗೌರವಿಸುವ ಹಿನ್ನೆಲೆಯಲ್ಲಿ 'ಯೋಗ ಸೇವಾ ಪ್ರಶಸ್ತಿ'ಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಯಾವುದೇ ಜಾತಿ, ಮತ, ಧರ್ಮ, ಭಾಷೆ, ಸ್ತ್ರೀ–ಪುರುಷ, ಪ್ರದೇಶಗಳ ನಿರ್ಬಂಧವಿಲ್ಲ. ನಾಡಿನಾದ್ಯಂತ ಅರ್ಹತೆಯುಳ್ಳವರಿಗೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಆಸಕ್ತರು ತಮ್ಮ ಯೋಗ ಸೇವಾ ದಾಖಲಾತಿ (ಝರಾಕ್ಸ್ ಪ್ರತಿ)ಗಳೊಂದಿಗೆ ಎಪ್ರಿಲ್ 30ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿ ಮತ್ತು ಅರ್ಜಿ ತಲುಪಿಸಲು ವಿಳಾಸ–ಯೋಗ ಪಾಠಶಾಲೆ, ಸುವರ್ಣೋತ್ಸವ ಸೇವಾ ಸಮಿತಿ–2025, ಬಸವ ಯೋಗ ಮಹಾವಿದ್ಯಾಲಯ, ಬಸವಪ್ರಭೆ ಕ್ಯಾಂಪಸ್, ಸಿದ್ಧಲಿಂಗ ನಗರ, ಗದಗ–582103, ದೂರವಾಣಿ ಸಂಖ್ಯೆ 9448317188, ಈ–ಮೇಲ್ : kspyoga@gmail.com.ನಿಗದಿತ ಅವಧಿಯಲ್ಲಿ ಖುದ್ದಾಗಿ /ಅಂಚೆ /ವಾಟ್ಸಾಪ್ ಮೂಲಕ ಅರ್ಜಿ ಸಲ್ಲಿಸಲು ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವ ಸೇವಾ ಸಮಿತಿ ಪರವಾಗಿ ಯೋಗ ಪಾಠಶಾಲೆ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟಿ ಮತ್ತು ನಿರ್ದೇಶಕ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆ ಮೂಲಕ ಪ್ರಾರ್ಥಿಸಿದ್ದಾರೆ.

### ಗಾಂಧಿ ಭವನವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್

# ಗಾಂಧಿ ತತ್ವಗಳ ಪ್ರಚಾರಕ್ಕೆ ಆದ್ಯತೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಹಾತ್ಮ ಗಾಂಧೀಜಿಯವರು ಬದುಕಿದ ರೀತಿ, ಹೋರಾಟದ ಗತಿ ಮತ್ತು ಅವರು ಬೋಧಿಸಿ, ಪಾಲಿಸಿದ ತತ್ವ, ಜೀವನ ಸಂದೇಶಗಳು ಇಂದಿನ ಸರಕಾರಗಳ ಮತ್ತು ಆಡಳಿತದ ಮೂಲ ತತ್ವಗಳಾಗಿವೆ ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಹೇಳಿದರು.

ಅವರು ಸೋಮವಾರ ಬೆಳಿಗ್ಗೆ ಧಾರವಾಡ ಕುಮಾರೇಶ್ವರ ನಗರದ ವ್ಯಾಪ್ತಿಯ ಧಾರವಾಡ ಹೊಸ ಕೇಂದ್ರ ಬಸ್ ನಿಲ್ದಾಣ ಹತ್ತಿರದಲ್ಲಿ ಧಾರವಾಡ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ನೂತನವಾಗಿ ನಿರ್ಮಿಸಿರುವ ಗಾಂಧಿ ಭವನವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.



ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುದ್ಧ, ಬಸವ, ಗಾಂಧಿ, ಅಂಬೇಡ್ಕರ ಅವರ ತತ್ವ–ಸಿದ್ಧಾಂತ, ಜೀವನ ಸಂದೇಶಗಳನ್ನು ಜನಸಾಮಾನ್ಯರಿಗೆ, ವಿಶೇಷವಾಗಿ ವಿದ್ಯಾರ್ಥಿಗಳಿಗೆ ಮತ್ತು ಯುವ ಸಮುದಾಯಕ್ಕೆ ನಿರಂತರವಾಗಿ ತಲುಪಿಸಲು ವಿವಿಧ ಕಾರ್ಯಕ್ರಮ, ಯೋಜನೆಗಳನ್ನು ಜಾರಿಗೊಳಿಸಿದ್ದಾರೆ ಎಂದು ಹೇಳಿದರು. ಗಾಂಧಿ ಭವನ ನಿರ್ಮಾಣಕ್ಕಾಗಿ ಪ್ರತಿ ಜಿಲ್ಲೆಗೆ ಉಚಿತವಾಗಿ ಅಗತ್ಯ ನಿವೇಶನ ನೀಡಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶಿಸಿದ್ದರು. ವಾರ್ತಾ ಇಲಾಖೆಯಿಂದ ಗಾಂಧಿ ಭವನ ನಿರ್ಮಿಸಲು ರೂ. 3 ಕೋಟಿ ಅನುದಾನ ಸಹ ಬಿಡುಗಡೆ ಮಾಡಲಾಗಿತ್ತು. ಅದರಂತೆ ಧಾರವಾಡ ಗಾಂಧಿ ಭವನ ಅತೀ ಸುಂದರವಾಗಿ ರೂಪುಗೊಂಡಿದೆ ಎಂದು ಸಚಿವರು ತಿಳಿಸಿದರು. ಗಾಂಧಿ ಭವನವನ್ನು ಗಾಂಧಿ ತತ್ವಗಳ ಪ್ರಚಾರ ಕೇಂದ್ರವಾಗಿ ರೂಪಿಸಲು ಕ್ರಮವಹಿಸಲಾಗುವುದು. ಇದೊಂದು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರವಾಸದ ಸ್ಥಳವಾಗಿ, ವಿಚಾರ ಸಂಕಿರಣ, ಗಾಂಧಿ ಕಾರ್ಯಕ್ರಮಗಳಿಗೆ ನೀಡುವ ಕುರಿತು ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿ ಕ್ರಮವಹಿಸಲಿದೆ. ಭವನದ ನಿರ್ವಹಣೆ ಹೊಣೆಯನ್ನು ಮಹಾನಗರಪಾಲಿಕೆ ಅಥವಾ ಇತರ ಏಜನ್ಸಿಗಳಿಗೆ ವಹಿಸುವ ಕುರಿತು ಸಮಿತಿ ಚರ್ಚಿಸಲಿದೆ ಎಂದು ಸಚಿವ ಸಂತೋಷ ಲಾಡ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಕೆ.ಆರ್.ಡಿ.ಐ.ಎಲ್. ಕಾರ್ಯಪಾಲಕ ಅಭಿಯಂತರರಾದ ಸುಜಾತಾ ಕಾಳೆ, ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಯ ಧಾರವಾಡ ವಿಭಾಗೀಯ ನಿಯಂತ್ರಣಾಧಿಕಾರಿ ಡಾ. ಶಶಿಧರ ಚನ್ನಪ್ಪಗೌಡರ, ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಗಾಂಧಿ ಅನುಯಾಯಿಗಳಾದ ಡಾ. ಸಂಜೀವ ಕುಲಕರ್ಣಿ, ಬಸವಪ್ರಭು ಹೊಸಕೇರಿ, ಶ್ರೀಶೈಲ ಕಮತರ ಸೇರಿದಂತೆ ಸಾರ್ವಜನಿಕರು, ಗಾಂಧಿ ಅಭಿಮಾನಿಗಳು ಭಾಗವಹಿಸಿದ್ದರು.

ವಾರ್ತಾ ಇಲಾಖೆಯ ಬೆಳಗಾವಿ ಉಪನಿರ್ದೇಶಕ ಗುರುನಾಥ ಕಡಬೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಧಾರವಾಡ ವಾರ್ತಾ ಸಹಾಯಕ ಅಧಿಕಾರಿ ಡಾ. ಸುರೇಶ ಹಿರೇಮಠ ಸ್ವಾಗತಿಸಿ, ವಂದಿಸಿದರು.

ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಗಾಂಧಿ ಭವನದ ನಿರ್ಮಾಣದ ಬಗ್ಗೆ, ಛಾಯಾಚಿತ್ರಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಗಾಂಧಿ ಭವನದ ನಿರ್ಮಾಣದ ಹಿನ್ನೆಲೆ ಹಾಗೂ ಗಾಂಧಿ ಭವನದ ಕಾರ್ಯಚಟುವಟಿಕೆಗಳ ಕುರಿತು ವಿವರಿಸಿ, ಗಾಂಧಿ ಭವನದ ವಿವಿಧ ಹಾಲ್, ಸೌಲಭ್ಯಗಳ ಕುರಿತು ವಿವರಿಸಿದರು.

### ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಪರಿಶೀಲಿಸಿದ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ

# ಗ್ರಾಮೀಣ ಪ್ರದೇಶದ ಜನರಿಗೆ ನರೇಗಾ ಆಸರೆ

■ ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಕೊಣ್ಣೂರ ಗ್ರಾ.ಪಂ ವ್ಯಾಪ್ತಿಯಲ್ಲಿ 2025–26ನೇ ಸಾಲಿನ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಮಾತನಾಡಿದ ಅವರು, ನರೇಗಾ ಯೋಜನೆಯಡಿ ಉದ್ಯೋಗ ಖಾತರಿ ಕೂಲಿ ಮೊತ್ತ 2025ರ ಎಪ್ರಿಲ್ 1ರಿಂದ ಜಾರಿಯಾಗುವಂತೆ 349ರಿಂದ 370 ರೂಗೆ ಹೆಚ್ಚಳವಾಗಿದೆ. ಕೂಲಿಕಾರರು ಗ್ರಾ.ಪಂಗೆ ಕೆಲಸದ ಬೇಡಿಕೆ ಸಲ್ಲಿಸಿ, ಕೆಲಸ ಪಡೆಯಬೇಕು. ಉದ್ಯೋಗ ಖಾತರಿ ಯೋಜನೆಯಡಿ ವರ್ಷಕ್ಕೆ 100 ಮಾನವ ದಿನಗಳ ಕೆಲಸ ಮಾಡಲು ಅವಕಾಶವಿದ್ದು, ಎಲ್ಲರೂ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.





ಬೇಸಿಗೆಯಲ್ಲಿ ಕೆಲಸ ಇಲ್ಲದ ಕಾರಣ ಖಾಲಿ ಕುಳಿತಿರುವ ಗ್ರಾಮೀಣ ಪ್ರದೇಶ ಜನರಿಗೆ ನರೇಗಾ ಯೋಜನೆಯಡಿ 13 ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರತಿ ಗ್ರಾಮಗಳಲ್ಲಿ ಸಾಮೂಹಿಕ ಕಾಮಗಾರಿ ಪ್ರಾರಂಭಿಸಿ ಸ್ಥಳೀಯವಾಗಿ ಕೆಲಸ ನೀಡುವ ಮೂಲಕ ಜನರ ಆರ್ಥಿಕವಾಗಿ ಸಬಲರನ್ನಾಗಿ ಮಾಡಲಾಗುತ್ತಿದೆ.

– ಎಸ್.ಕೆ. ಇನಾಮದಾರ್.
ಕಾರ್ಯನಿರ್ವಾಹಕ ಅಧಿಕಾರಿ, ನರಗುಂದ.

ಕೂಲಿಕಾರರಿಗೆ ಅಳತೆಗೆ ಅನುಸಾರವಾಗಿ ಕೂಲಿ ಪಾವತಿಯಾಗುತ್ತದೆ. ಅಳತೆಗೆ ತಕ್ಕಂತೆ ಕೆಲಸ ಮಾಡಬೇಕು. ಪ್ರತಿ ದಿನ ಎರಡು ಬಾರಿ ಎನ್.ಎಂ.ಎಂ.ಎಸ್ ಹಾಜರಾತಿ ತೆಗೆದುಕೊಳ್ಳಲಾಗುತ್ತದೆ. ಕೂಲಿಕಾರರು ಎರಡೂ ಹಾಜರಾತಿಯನ್ನು ಕಡ್ಡಾಯವಾಗಿ ಹಾಕಿಸಬೇಕು. ಒಂದು ವೇಳೆ ಬೆಳಗಿನ ಹಾಜರಾತಿ ಹಾಕಿಸಿ ಮಧ್ಯಾಹ್ನದ ಹಾಜರಾತಿ ಹಾಕಿಸಲಿಲ್ಲ ಎಂದಾದರೆ ನಿಮಗೆ ಆ ದಿನದ ಕೂಲಿ ಪಾವತಿಯಾಗುವುದಿಲ್ಲ ಎಂದು ತಿಳಿಸಿದರು.

ಕೆಲಸ ಪ್ರಾರಂಭವಾಗಿದೆ ಎಂದು ಎನ್.ಎಂ.ಆರ್.ನಲ್ಲಿ ಹೆಸರು ಇಲ್ಲದೆ ಯಾವ ಕೂಲಿಕಾರರು ಕೆಲಸಕ್ಕೆ ಬರುವಂತಿಲ್ಲ. ಒಂದು ವೇಳೆ ಬಂದರೂ ಅವರಿಗೆ ಕೂಲಿ ಹಣ ಪಾವತಿಯಾಗುವುದಿಲ್ಲ. ಹಾಗಾಗಿ ಕೂಲಿಕಾರರು NMR ಹಾಕಿಸಿ ಕೆಲಸಕ್ಕೆ ಬರುವಂತೆ ಸೂಚಿಸಿದರು.

ಈ ವೇಳೆ ತಾಲೂಕಾ ತಾಂತ್ರಿಕ ಸಂಯೋಜಕ ಹನುಮಂತ ಡಂಬಳ, ತಾಂತ್ರಿಕ ಸಹಾಯಕ ಲಿಂಗರಾಜ ಮುದಿಗೌಡ್ರ, ಗ್ರಾ.ಪಂ ಸಿಬ್ಬಂದಿಗಳು, ಗ್ರಾಮ ಕಾಯಕ ಮಿತ್ರರು, ಕಾಯಕ ಬಂಧುಗಳು ಇದ್ದರು.

# ಭಾರತೀಯ ಮೂಲ ಸಂಸ್ಕೃತಿ ಉಳಿಯಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕತೆಯು ನಮ್ಮ ಹಿರಿಯರ ಆಚಾರ–ವಿಚಾರ, ಸಂಪ್ರದಾಯಗಳ ಮೇಲೆ ಅಗಾಧ ಪ್ರಭಾವ ಬೀರಿ ನಮ್ಮ ಭಾರತೀಯ ಸಂಸ್ಕೃತಿಯನ್ನು ನಾಶಗೊಳಿಸುತ್ತಿದೆ. ಅದಕ್ಕಾಗಿ ಇಂದಿನ ಯುವ ಜನಾಂಗವು ನಮ್ಮ ಮನೆಯ ವಾತಾವರಣ, ಗ್ರಾಮೀಣ ಸೊಗಡು, ನಮ್ಮ ಸಂಬಂಧಗಳು, ನೈತಿಕ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುತ್ತಾ ಹೆಮ್ಮೆಯ ನಮ್ಮ ಭಾರತೀಯ ಸಂಸ್ಕೃತಿಯನ್ನು ಉಳಿಸಬೇಕಾದದ್ದು ನಮ್ಮ ನಿಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಡಾ. ಪಿ.ಎಚ್. ಕ್ಯಾರಕೊಪ್ಪ ಕಿವಿಮಾತು ಹೇಳಿದರು.

ಇಲ್ಲಿನ ನರಸಾಪುರದ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಜನಪದ ಉತ್ಸವದ ಅಂಗವಾಗಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ನಮ್ಮ ಸಂಸ್ಕೃತಿ–ನಮ್ಮ ಹೆಮ್ಮೆ ವಿಷಯಧಾರಿತ ಭಾಷಣ ಸ್ಪರ್ಧೆ ಹಾಗೂ ಪ್ರಬಂಧ ಸ್ಪರ್ಧೆ ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಹಿರಿಯ ಪ್ರಾಧ್ಯಾಪಕ ಡಾ.ಶಿವಪ್ಪ ಎಮ್.ಕುರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಡಾ. ಕೆ.ಬಿ. ದಳವಾಯಿ, ಡಾ. ಮಹಾದೇವ ವಡೇಕಾರ, ಡಾ. ನಾಗಮ್ಮನವರ್, ಡಾ. ರೇಖಾ ನೀರಲಗಿ, ಜ್ಯೋತಿ ಮುಂತಾದವರು ಉಪಸ್ಥಿತರಿದ್ದರು.

ಗಂಗಾ ಪ್ರಾರ್ಥಿಸಿದರು. ಜುಮೇದ ಕಾರ್ಯಕ್ರಮ ನಿರೂಪಿಸಿದರು. ಪ್ರಾಧ್ಯಾಪಕ ಶರಣಪ್ಪ ವಂದಿಸಿದರು.

# ಮೇ 5ಕ್ಕೆ ತ್ರೈಮಾಸಿಕ ಕೆಡಿಪಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಎಪ್ರಿಲ್ 21 ರಂದು ಬೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಕಾರಣಾಂತರಗಳಿಂದ ಮೇ 6 ರಂದು ಬೆಳಿಗ್ಗೆ 10.30 ಗಂಟೆಗೆ ಮುಂದೂಡಲಾಗಿತ್ತು. ಆದರೆ ಕಾರಣಾಂತರಗಳಿಂದಾಗಿ ಈ ಸಭೆಯನ್ನು 05–05–2025 ರಂದು ಬೆಳಿಗ್ಗೆ 10.30 ಗಂಟೆಗೆ ಮರು ನಿಗದಿಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನ್ನಭಾಗ್ಯ ಅಕ್ಕಿಗೆ ಕನ್ನ: 50 ಕೆಜಿ ತೂಕದ ಒಂದು ಸಾವಿರಕ್ಕೂ ಹೆಚ್ಚು ಚೀಲಗಳು ವಶಕ್ಕೆ!

■ ವಿಜಯಸಾಕ್ಷಿ ಸುದ್ದಿ, ಗದಗ

ಅಕ್ರಮವಾಗಿ ಸಾಗಿಸುತ್ತಿದ್ದ ಅಪಾರ ಪ್ರಮಾಣದ ಅನ್ನ ಭಾಗ್ಯ ಅಕ್ಕಿ ವಶಕ್ಕೆ ಪಡೆದಿರುವ ಘಟನೆ ಗದಗ ತಾಲೂಕಿನ ಹೊಸಹಳ್ಳಿ ಗ್ರಾಮದ ಬಳಿ ನಡೆದಿದೆ.

ಆಹಾರ ಇಲಾಖೆ ಹಾಗೂ ಪೊಲೀಸರಿಂದ ಜಂಟಿ ಕಾರ್ಯಾಚರಣೆ ನಡೆಸಿ, ಸುಮಾರು 50 ಕೆಜಿ ತೂಕದ ಒಂದು ಸಾವಿರಕ್ಕೂ ಹೆಚ್ಚು ಚೀಲಗಳು ವಶಕ್ಕೆ ಪಡೆಯಲಾಗಿದೆ.



ತೆಲಂಗಾಣ ಮೂಲದ TS 07, UN 5566 ಲಾರಿಯು ಗದಗ ತಾಲೂಕಿನ ಹುಲಕೋಟಿ ಗ್ರಾಮದಿಂದ ಮಹಾರಾಷ್ಟ್ರಕ್ಕೆ ಹೋಗುತ್ತಿದ್ದ ವೇಳೆ, ಅಧಿಕಾರಿಗಳು ದಾಳಿ ನಡೆಸಿದ್ದು, ಲಾರಿ ವಶಕ್ಕೆ ಪಡೆದು ಚಾಲಕನ ವಿಚಾರಣೆ ನಡೆಸುತ್ತಿದ್ದಾರೆ. ಗದಗ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಮಾಜಿ ಪ್ರೇಮಿಯ ಬ್ಲ್ಯಾಕ್ ಮೇಲ್: ಆರೋಪಿ ಪೊಲೀಸರ ವಶಕ್ಕೆ

# ಮರ್ಯಾದೆಗೆ ಅಂಜಿ ನೇಣಿಗೆ ಶರಣಾದ ಯುವತಿ!

■ ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಪ್ರೇಮಿಯ ಬ್ಲ್ಯಾಕ್ ಮೇಲ್ ಗೆ ಅಂಜಿ ಮದುವೆ ಸಂಭ್ರಮದಲ್ಲಿದ್ದ ಯುವತಿಯೋರ್ವಳು ಡೆತ್ ನೋಟ್ ಬರೆದಿಟ್ಟು ನೇಣಿಗೆ ಶರಣಾಗಿರುವ ಘಟನೆ ಗದಗ ತಾಲೂಕಿನ ಅಸುಂಡಿ ಗ್ರಾಮದಲ್ಲಿ ಜರುಗಿದೆ.



29 ವರ್ಷದ ಸೈರಾಬಾನು ನದಾಫ್ ನೇಣಿಗೆ ಶರಣಾದ ಯುವತಿ. ಮುಂದಿನ ತಿಂಗಳು ಅಂದ್ರೆ ಮೇ 8ರಂದು ಸೈರಾಬಾನು ನದಾಫ್ ಮದುವೆ ನಿಗದಿಯಾಗಿತ್ತು. ಹಾಗಾಗಿ ಇತ್ತ ಮನೆಯಲ್ಲಿ ಅದ್ದೂರಿ ಮದುವೆಗೆ ಭರ್ಜರಿ ತಯಾರಿ ಕೂಡ ನಡೆದಿತ್ತು. ಸೈರಾಬಾನು ಖುಷಿಯಿಂದಲೇ ತಾಳಿ, ಬಟ್ಟೆ ಎಲ್ಲವನ್ನು ಖರೀದಿಸಿದ್ದಳು.

ಭಾನುವಾರ ಪೋಷಕರು ಮದುವೆ ವಸ್ತುಗಳ ಖರೀದಿಗೆ ಹೋದಾಗ ಸೈರಾಬಾನು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಮನೆಯ ಬಾಗಿಲು ತೆ–ರೆದು ನೋಡಿದಾಗ ಮಗಳು ಆತ್ಮಹತ್ಯೆ ಮಾಡಿಕೊಂಡಿದ್ದು ತಿಳಿದು ಬಂದಿದೆ. ಮಗಳ ಸ್ಥಿತಿ ನೋಡಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಮದುವೆ ಸಂಭ್ರಮದಲ್ಲಿ ಇದ್ದ ಮನೆಯಲ್ಲಿ ಇದೀಗ ಸೂತಕದ ಛಾಯೆ ಆವರಿಸಿದೆ.

ಐದು ವರ್ಷಗಳ ಹಿಂದೆ ಮೈಲಾರಿ ಜೊತೆ ಸೈರಾಬಾನು ನದಾಫ್ ಲವ್ ಬ್ರೇಕಪ್ ಆಗಿತ್ತು. ನಿನಗೆ ತೊಂದರೆ ಕೊಡಲ್ಲ ಅಂತ ಮಾಜಿ ಪ್ರೇಮಿ ಬರ್ತಡೇ ಆಚರಿಸಿದ್ದ. ಆದರೆ ಐದು ವರ್ಷಗಳ ಬಳಿಕ ಮತ್ತೆ ಎಂಟ್ರಿಕೊಟ್ಟ ಪಾಗಲ್ ಪ್ರೇಮಿ, ಬಳಿಕ ವಿಡಿಯೋ, ಫೋ–ಟೋ ವೈರಲ್ ಮಾಡುವುದಾಗಿ ಬ್ಲ್ಯಾಕ್ ಮೇಲ್ ಮಾಡಿದ್ದಾನೆ. ಹೀಗಾಗಿ ಮರ್ಯಾದೆಗೆ ಹೆದರಿ ಸೈರಾಬಾನು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಗ್ರಾಮೀಣ ಠಾಣೆಯ ಪಿಎಸ್ಐ ಎಲ್ ಕೆ ಜೂಲಕಟ್ಟಿ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಘಟನೆಗೆ ಸಂಬಂಧಿಸಿದಂತೆ ಆರೋಪಿ ಮೈಲಾರಿಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ ಎನ್ನಲಾಗಿದೆ.

ಗದಗ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

**ಡೆತ್ ನೋಟ್ ನಲ್ಲಿ ಯುವತಿ ಬರೆದಿದ್ದೇನು?**


'ನನ್ನ ಸಾವಿಗೆ ನಾನೇ ಮಾಡಿದ ತಪ್ಪು ಅದು ಏನೆಂದರೇ ಮೈಲಾರಿ ಎನ್ನುವ ಹುಡಗನನ್ನು ನಾನು ಪ್ರೀತಿ ಮಾಡಿದೆ. ಅದು 5 ವರ್ಷಗಳ ಹಿಂದೆ ಬ್ರೇಕಪ್ ಆಯಿತು. ಮತ್ತೆ ಇವಾಗ ಅಂದರೆ 1 ತಿಂಗಳ ಹಿಂದೆ ಮತ್ತೆ ಮೀಟ್ ಆಗಿ ಅವರೇ ಖಟಣಚಿರಡಿಚಿಟ ನಲ್ಲಿ ಛರ ಮಾಡಿದ್ದರು. ನಂತರ ನನ್ನ ಹುಟ್ಟಿದ ಹಬ್ಬವನ್ನು ಮಾಡಿದ್ದರು. ಅವರು ನನಗೆ ಮಾತು ಕೊಟ್ಟಿದ್ದರು. ನಿನ್ನ ಯಾವತ್ತು ತೊಂದರೆ ಬರದ ಹಾಗೇ ನೋಡಿಕೊಳ್ಳುತ್ತೇನೆ ಎಂದು ಆದರೆ ಇವಾಗ ನನ್ನ ಫೋಟೋ, ವಿಡಿಯೋ ಎಲ್ಲಾ ಇಟ್ಟುಕೊಂಡು ನನ್ನಗೆ ತೊಂದರೆ ಮಾಡುತ್ತಿದ್ದಾರೆ. ಅದಕ್ಕಾಗಿ ನಾನು ನನ್ನ ಸಾವಿನ ನಿರ್ಧಾರ ಮಾಡಿದ್ದೇನೆ. ನನ್ನ ತಂದೆ, ತಾಯಿಗೆ ಯಾವುದೇ ರೀತಿಯಾದ ತೊಂದರೆ ಆಗಬಾರದು. ನನ್ನನ್ನು ಕ್ಷಮಿಸಿ ಎಂದು ಯುವತಿ ಬರೆದಿದ್ದಾರೆ.

# ಜಾನಪದವನ್ನು ಉಳಿಸುವ ಕಾರ್ಯವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾನವೀಯ ಸಂಬಂಧ ಗಟ್ಟಿಗೊಳಿಸುವ ಶಕ್ತಿ ಜಾನಪದ ಕಲೆಗೆ ಇದೆ. ಜಾನಪದ ಕಲೆ ತನ್ನದೇ ಆದ ಇತಿಹಾಸ ಹೊಂದಿದ್ದು, ಅದನ್ನು ಉಳಿಸಿ ಬೆಳೆಸುವ ಕಾರ್ಯವಾಗಬೇಕು ಎಂದು ಪ್ರಾಚಾರ್ಯ ಎಮ್. ಯು. ಹಿರೇಮಠ ಹೇಳಿದರು.

ಇಲ್ಲಿನ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಸಭಾಭವನದಲ್ಲಿ ನಡೆದ ಜಾನಪದ ಉತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಖ್ಯಾತ ಜಾನಪದ ಕಲಾವಿದ ನಿಂಗಪ್ಪ ಗುಡ್ಡದ ಮಾತನಾಡಿ, ಆಧುನಿಕ ಜಗತ್ತಿನಲ್ಲಿ ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವ ಅನಿವಾರ್ಯತೆಯಿದೆ. ಜಾನಪದ ಕಲೆಗಳು ಹಳ್ಳಿಯಲ್ಲಿ ಇನ್ನೂ ಜೀವಂತವಾಗಿದೆ. ಅದಕ್ಕೆ ಪ್ರೋತ್ಸಾಹ ನೀಡಲು ಮುಂದಾಗಬೇಕು ಎಂದರು.

ಪ್ರೊ. ಸಿದ್ದಲಿಂಗೇಶ ಸಜ್ಜನಶೆಟ್ಟರ ಮಾತನಾಡಿ, ನಿರಂತರವಾಗಿ ಬಾಯಿಂದ ಬಾಯಿಗೆ ಹರಿದಾಡುವ ಕನ್ನಡದ ಅಸ್ಮಿತೆಯನ್ನು ಉಳಿಸಿ ಬೆಳೆಸುವ ದೊಡ್ಡ ಶಕ್ತಿ ಎಂದರೆ ಜಾನಪದ ಸಾಹಿತ್ಯವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರೊ. ಪ್ರಕಾಶ ಕರಿಗಾರ, ಡಾ. ಎಸ್.ಕೆ. ಪೂಜಾರ, ಐಕ್ಯೂಎಸಿ ಪ್ರೊ. ಮಹಬೂಬ ಆರೀಫ ಸದರಸೋಪವಾಲೆ, ಪ್ರೊ. ಸತೀಶ ಸರ್ವಿ, ಪ್ರೊ. ದ್ಯಾಮಣ್ಣ ಮನಿಕಟ್ಟಿ, ಪ್ರೊ. ರಿಯಾಜಅಹ್ಮದ ದೊಡ್ಡಮನಿ, ಪ್ರೊ. ಪ್ರತಿಭಾ ಚವ್ಹಾಣ, ಪ್ರೊ. ಸುಮಿತ್ರಾ ಮೇದಾರ, ಪ್ರೊ. ವಹಿದಾ ಕಿಲ್ಲೆದಾರ, ಲಕ್ಷ್ಮೀ ನಾಗರಾಳ, ಶ್ರೀದೇವಿ ಸೇರಿದಂತೆ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

# ರೋಹಿತ್ ವೆಮುಲಾ ಕಾಯ್ದೆ ಪರಿಶೀಲನೆ: ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರೋಹಿತ್ ವೆಮುಲಾ ಕಾಯ್ದೆಯ ಕರಡು ಸಿದ್ಧಪಡಿಸುವಂತೆ ಕಾನೂನು ಸಲಹೆಗಾರರಿಗೆ ಸೂಚನೆ ನೀಡಲಾಗಿದೆ ಎಂದು ಪಕ್ಷದ ವರಿಷ್ಠ ರಾಹುಲ್ ಗಾಂಧಿಯವರಿಗೆ ಪತ್ರ ಬರೆಯಲಾಗಿದ್ದು, ಈ ಕುರಿತು ಪರಿಶೀಲಿಸಿ ಕಾಯ್ದೆ ತರಲು ಪ್ರಯತ್ನ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಸೋಮವಾರ ಮಾಧ್ಯಮದವರೊಂದಿಗೆ ಮಾತನಾಡಿ ಈ ವಿಷಯ ತಿಳಿಸಿದರು.



ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಿ. ಇ.ಟಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಜನಿವಾರ ತೆಗೆಸಿರುವ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka